ಸಂಪುಟ : 10 ಸಂಚಿಕೆ: 203 ಪುಟ : 4+2 ಬೆಲೆ: 3.00 ಶನಿವಾರ ಸೆಪ್ಟೆಂಬರ್ 20 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 203 Pages : 4+2 Price : 3.00 Saturday September 20 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ತಾಲೂಕಾ ಕುರುಬರ ಸಂಘದ ರಜತ ಮಹೋತ್ಸವಕ್ಕೆ ಆಗಮಿಸಲಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ

# ಸಿಎಂ ಆಗಮನಕ್ಕೆ ಸಕಲ ಸಿದ್ಧತೆ



■ ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಾ ಕುರುಬರ ಸಂಘದ ರಜತ ಮಹೋತ್ಸವದ ಸವಿನೆನಪಿಗಾಗಿ ಸ್ಮರಣ ಸಂಚಿಕೆ ಬಿಡುಗಡೆ, ರಾಜ್ಯ ಮಟ್ಟದ ಕನಕೋತ್ಸವ ಹಾಗೂ ಸಂಘಜೀವಿ ಫಕೀರಪ್ಪ ಹೆಬಸೂರು ಅವರ ಅಭಿನಂದನಾ ಗ್ರಂಥ ಸಮರ್ಪಣೆ ಕಾರ್ಯಕ್ರಮದ ಹಿನ್ನೆಲೆಯಲ್ಲಿ ನಗರಕ್ಕೆ ಆಗಮಿಸುತ್ತಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಸ್ವಾಗತಕ್ಕೆ ಕನಕ ಭವನದ ರಾಕೇಶ ಸಿದ್ದರಾಮಯ್ಯ ಸಭಾಂಗಣದಲ್ಲಿ ಭರದ ಸಿದ್ಧತೆ ನಡೆದಿದೆ.

ನಿರಂತರವಾಗಿ ಸುರಿದ ಮಳೆಯಿಂದ ನಗರದ ವಿವಿಧ ಭಾಗಗಳಲ್ಲಿ ರಸ್ತೆಗಳು ಗುಂಡಿಗಳಿಂದ ಕೂಡಿತ್ತು. ನಗರದ ವಿವಿಧ ಭಾಗಗಳಲ್ಲಿರುವ ಗುಂಡಿ ಮುಚ್ಚುವ ಕೆಲಸ ಭರದಿಂದ ಸಾಗಿದೆ. ಪ್ರಮುಖ ವೃತ್ತದಲ್ಲಿರುವ ಗುಂಡಿಗಳಿಗೆ ತಾತ್ಕಾಲಿಕ ಮುಕ್ತಿ ನೀಡುವ ಮೂಲಕ ವಾಹನ ಸವಾರರು ಸುಗಮವಾಗಿ ಓಡಾಡಲು ಅನೂಕುಲವಾಗಲಿದೆ.

ನಗರದ ಕನಕ ಭವನದಲ್ಲಿ ಈಗಾಗಲೇ ಬೃಹತ್ ವೇದಿಕೆ ಸಿದ್ಧವಾಗಿದೆ. ಸುಮಾರು 10 ಸಾವಿರ ಜನರಿಗೆ ಕುಳಿತುಕೊಳ್ಳಲು ಆಸನ ವ್ಯವಸ್ಥೆ ಕಲ್ಪಿಸಲಾಗಿದೆ. ಬೃಹತ್ ಅಳತೆಯ ಬ್ಯಾನರ್‌ನ್ನು ವೇದಿಕೆ ಮುಂಭಾಗದಲ್ಲಿ ಹಾಕಲಾಗಿದೆ. ಅಂತೆಯೇ, ಅವಳಿ ನಗರದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಸ್ವಾಗತ ಕೋರುವ ಹಲವಾರು ಬ್ಯಾನರ್‌ಗಳನ್ನು ಅಳವಡಿಸಲಾಗಿದೆ. ಜಿಲ್ಲೆಯ ವಿವಿಧ ಸಮಾಜದ ನಾಯಕರ ಹಾಗೂ ಕುರುಬ ಸಮಾಜದ ಮುಖಂಡರಿಂದ ಸ್ವಾಗತ ಕೋರುವ ಬ್ಯಾನರ್ ಅಳವಡಿಸಲಾಗಿದೆ. ವೇದಿಕೆ ಮುಂಭಾಗದಲ್ಲಿ ವಿದ್ಯುತ್ ದೀಪದಿಂದ ಅಲಂಕಾರ ಮಾಡಲಾಗಿದೆ.

ಜಿಲ್ಲೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಆಗಮಿಸುತ್ತಿರುವ ಹಿನ್ನೆಲೆಯಲ್ಲಿ ಪೊಲೀಸ್ ಇಲಾಖೆಯಿಂದ ಸಕಲ ರೀತಿಯಲ್ಲಿ ಸಿದ್ಧತೆ ಮಾಡಲಾಗಿದೆ. ನಗರಸಭೆ ಸಹಯೋಗದಲ್ಲಿ ಅವಳಿ ನಗರದ ವಿವಿಧ ಭಾಗಗಳಲ್ಲಿರುವ ಕಸವನ್ನು ನಗರಸಭೆಯ ಸಿಬ್ಬಂದಿಗಳಿಂದ ಸ್ವಚ್ಛಗೊಳಿಸಲಾಗಿದೆ. ನಗರದ ಪ್ರಮುಖ ವೃತ್ತ ಹಾಗೂ ರಸ್ತೆಗಳ ಸ್ವಚ್ಛತೆಗೂ ಆದ್ಯತೆ ನೀಡಿ, ಎಲ್ಲೆಡೆ ಸಿದ್ಧತೆ ನಡೆಸಲಾಗಿದೆ.

ತಾಲೂಕು ಕುರುಬರ ಸಂಘದ ರಜತ ಮಹೋತ್ಸವದ ಸವಿನೆನಪಿಗಾಗಿ ಸ್ಮರಣ ಸಂಚಿಕೆ ಬಿಡುಗಡೆ, ರಾಜ್ಯ ಮಟ್ಟದ ಕನಕೋತ್ಸವ ಹಾಗೂ ಸಂಘಜೀವಿ ಫಕೀರಪ್ಪ ಹೆಬಸೂರು ಅಭಿನಂದನಾ ಗ್ರಂಥ ಸಮರ್ಪಣೆ ಕಾರ್ಯಕ್ರಮ ಸೆ.20ರಂದು ಬೆಳಿಗ್ಗೆ 11ಕ್ಕೆ ಕನಕ ಭವನದ ರಾಕೇಶ ಸಿದ್ದರಾಮಯ್ಯ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ. ಕಾರ್ಯಕ್ರಮದ ಉದ್ಘಾಟನೆ ಹಾಗೂ ಅಭಿನಂದನಾ ಗ್ರಂಥ ಬಿಡುಗಡೆಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ನೆರವೇರಿಸುವರು. ಸ್ಮರಣ ಸಂಚಿಕೆಯನ್ನು ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಬಿಡುಗಡೆ ಮಾಡುವರು. ನಾಮಫಲಕ ಅನಾವರಣವನ್ನು ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ ನೆರವೇರಿಸುವರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ತಾಲೂಕು ಕುರುಬರ ಸಂಘದ ಅಧ್ಯಕ್ಷ ಫಕೀರಪ್ಪ ಹೆಬಸೂರ ವಹಿಸುವರು.



## ಗುರಿಕಾರ ಪಾಲಕರಿಗೆ ಜಿಎಸ್‌ಪಿ ಸಾಂತ್ವನ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಈಚೆಗೆ ರೋಣ ತಾಲೂಕಿನ ಬೆಳವಣಿಕಿ ಬಳಿಯ ಇರುವೆ ಹಳ್ಳದಲ್ಲಿ ಕೊಚ್ಚಿಹೋಗಿ ಮರಣ ಹೊಂದಿದ ಆರೋಗ್ಯ ಇಲಾಖೆಯ ಬಸಮ್ಮ ಗುರಿಕಾರರ ನರೇಗಲ್ಲದ ಮನೆಗೆ ಶಾಸಕ ಜಿ.ಎಸ್. ಪಾಟೀಲ ಭೇಟಿ ನೀಡಿ ಅವರ ಪಾಲಕರಿಗೆ ಸಾಂತ್ವನ ಹೇಳಿದರು.



ಭಗವಂತನ ಇಚ್ಛೆಗೆ ವಿರುದ್ಧವಾಗಿ ನಾವು ಏನೂ ಮಾಡುವಂತಿಲ್ಲ. ಮೂವರು ಹೊರಟಿದ್ದ ಗಾಡಿಯಲ್ಲಿ ಇಬ್ಬರು ಬದುಕಿ ಬಂದರೆ ಇವಳಿಗೆ ಆ ಅವಕಾಶವನ್ನು ಭಗವಂತ ನೀಡಲಿಲ್ಲ. ಬದುಕಿನಲ್ಲಿ ಬಂದದ್ದನ್ನು ಎದುರಿಸಲೇಬೇಕು. ನೀವು ಧೈರ್ಯವಾಗಿರಿ, ನಿಮ್ಮೊಂದಿಗೆ ನಾವಿದ್ದೇವೆ ಎಂದು ಶಾಸಕರು ಪಾಲಕರಿಗೆ ಧೈರ್ಯ ತುಂಬಿದರು.

ತಮ್ಮೊಂದಿಗೆ ಬಂದಿದ್ದ ರೋಣ ತಹಸೀಲ್ದಾರ ನಾಗರಾಜ ಮತ್ತು ಆರೋಗ್ಯ ಇಲಾಖೆಯ ವೈದ್ಯಾಧಿಕಾರಿ ಬಳಿ ಮೃತರ ಕುಟುಂಬಕ್ಕೆ ಯಾವ ರೀತಿ ಸಹಾಯ ಮಾಡಬಹುದು ಎಂಬುದನ್ನು ಕೇಳಿ ತಿಳಿದರಲ್ಲದೆ, ಆದಷ್ಟು ಬೇಗ ಈ ಕುಟುಂಬಕ್ಕೆ ಎಲ್ಲ ಆರ್ಥಿಕ ಮತ್ತು ಇತರೆ ಸೌಲಭ್ಯಗಳನ್ನು ಒದಗಿಸಿ ಅನುಕೂಲ ಮಾಡಿಕೊಡಬೇಕೆಂದು ಶಾಸಕರು ಅಧಿಕಾರಿಗಳಿಗೆ ತಿಳಿಸಿದರು.

ಮೃತ ಪುತ್ರಿಯನ್ನು ನೆನೆದ ತಂದೆ-ತಾಯಿಯರ ಕಣ್ಣಾಲಿಗಳಲ್ಲಿ ನೀರು ಮಡುಗಟ್ಟಿತ್ತು. ನಮ್ಮ ಮನೆತನ ನಡೆಯಲು ಅವಳ ತಮ್ಮನಿಗೆ ಸರಕಾರಿ ನೌಕರಿಯನ್ನು ಒದಗಿಸಿಕೊಡಬೇಕೆಂದು ಬಸಮ್ಮಳ ಪಾಲಕರು ಶಾಸಕರಲ್ಲಿ ಮನವಿ ಮಾಡಿದರು. ಈ ಸಂದರ್ಭದಲ್ಲಿ ಡಾ. ಕೆ.ಬಿ. ಧನ್ನೂರ, ಶಹರ ಕಾಂಗ್ರೆಸ್ ಅಧ್ಯಕ್ಷ ಶಿವನಗೌಡ ಪಾಟೀಲ, ವಿ.ಬಿ. ಸೋಮನಕಟ್ಟಿಮಠ, ಪ.ಪಂ ಉಪಾಧ್ಯಕ್ಷ ಕುಮಾರಸ್ವಾಮಿ ಕೋರಧಾನ್ಯಮಠ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಶರಣಪ್ಪ ಬೆಟಗೇರಿ, ಹಿರಿಯ ನ್ಯಾಯವಾದಿ ಎಂ.ಎನ್. ಹುಲಕೋಟಿ, ಪ.ಪಂ ಮುಖ್ಯಾಧಿಕಾರಿ ಮಹೇಶ ನಿಡಶೇಶಿ, ಕಳಕನಗೌಡ ಪೊಲೀಸ್‌ಪಾಟೀಲ, ಎಂ.ಎಸ್. ದಢೇಸೂರಮಠ, ಶೇಕಪ್ಪ ಕೆಂಗಾರ, ರಾಜಾಬಕ್ಷಿ ನದಾಫ್, ಪ.ಪಂ ಸದಸ್ಯರು ಸೇರಿದಂತೆ ಮುಖಂಡರಿದ್ದರು.

## ಇಂದು ಗದಗ ಜಿಲ್ಲೆಗೆ ಸಿಎಂ ಸಿದ್ದರಾಮಯ್ಯ

■ ವಿಜಯಸಾಕ್ಷಿ ಸುದ್ದಿ, ಗದಗ

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸೆಪ್ಟೆಂಬರ್ 20 ರಂದು ಬೆಳಿಗ್ಗೆ 10 ಗಂಟೆಗೆ ಬೆಂಗಳೂರಿನಿಂದ ವಿಮಾನದ ಮೂಲಕ ಹೊರಟು ಬೆಳಿಗ್ಗೆ 11 ಗಂಟೆಗೆ ಹುಬ್ಬಳ್ಳಿ ವಿಮಾನ ನಿಲ್ದಾಣಕ್ಕೆ ಆಗಮಿಸುವರು.



ಬೆಳಿಗ್ಗೆ 11.30 ಗಂಟೆಗೆ ಹುಬ್ಬಳ್ಳಿಯ ವಿಮಾನ ನಿಲ್ದಾಣದಿಂದ ರಸ್ತೆ ಮೂಲಕ ಹೊರಟು ಶಿರಗುಪ್ಪಿ, ಅಣ್ಣಿಗೇರಿ, ಹುಲಕೋಟಿ ಮಾರ್ಗವಾಗಿ ಮಧ್ಯಾಹ್ನ 12.15 ಗಂಟೆಗೆ ಗದುಗಿಗೆ ಆಗಮಿಸಿ, ಜವಳಗಲ್ಲಿಯಲ್ಲಿ ಪ್ರಭುವಿನೆಡೆಗೆ ಪ್ರಭುತ್ವ ಘಟಕ ವೀಕ್ಷಣೆ ಮಾಡುವರು. ನಂತರ 12.35 ಗಂಟೆಗೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಚೇರಿಯಲ್ಲಿನ ಕಮಾಂಡ್ ಸೆಂಟರ್‌ಗೆ ಭೇಟಿ ನೀಡುವರು.

ನಂತರ ಮಧ್ಯಾಹ್ನ 1 ಗಂಟೆಗೆ ಗದಗನ ಮುಳಗುಂದ ರಸ್ತೆಯಲ್ಲಿನ ಕನಕ ಭವನ ಶ್ರೀ ರಾಕೇಶ ಸಿದ್ದರಾಮಯ್ಯ ಸಭಾಂಗಣದಲ್ಲಿ ಗದಗ ತಾಲೂಕು ಕುರುಬರ ಸಂಘ (ರಿ) ಗದಗ ▸▸ 4ನೇ ಪುಟಕ್ಕೆ




### ಗದಗ ತಾಲೂಕಾ ಕುರುಬರ ಸಂಘದಲ್ಲಿಂದು ಅವಿಸ್ಮರಣೀಯ ಕಾರ್ಯಕ್ರಮ

# ರಜತ ಮಹೋತ್ಸವಕ್ಕೆ ಸಾಕ್ಷಿಯಾಗಲಿದ್ದಾರೆ ನಾಡದೊರೆ











ಗದಗ ತಾಲೂಕಾ ಕುರುಬರ ಸಂಘವು ಸ್ಥಾಪನೆಯಾಗುವ ಪೂರ್ವದಲ್ಲಿಯೇ ಈಗಿನ ಜಿಲ್ಲಾ ಕುರುಬರ ಸಂಘದ ಅಧ್ಯಕ್ಷರಾಗಿರುವ ಪಕ್ಕೀರಪ್ಪ ಹೆಬಸೂರ, ದಿ. ಪರಶುರಾಮ ಎಲ್.ಕೊಪ್ಪದ, ಶಶಿಧರ ರೊಳ್ಳಿ ಇವರು ಕನಕದಾಸ ಸಾಂಸ್ಕೃತಿಕ ಸೇವಾ ಸಂಘದ ಅಡಿಯಲ್ಲಿ 2-4-1995ರಂದು ಕೆಚ್ಚೆದೆಯ ವೀರ, ಬ್ರಿಟಿಷರಿಗೆ ಸೋಲಿನ ರುಚಿ ತೋರಿಸಿದ ವೀರಯೋಧ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣನ ಮೂರ್ತಿ ಸ್ಥಾಪನೆಯನ್ನು ಗದಗ-ಬೆಟಗೇರಿ ನಗರಸಭೆ ಹತ್ತಿರ ಇಂದಿನ ಮುಖ್ಯಮಂತ್ರಿಗಳು, ಅಂದಿನ ಹಣಕಾಸು ಸಚಿವರಾಗಿದ್ದ ಸಿದ್ದರಾಮಯ್ಯನವರಿಂದ ನೆರವೇರಿಸಿದ್ದು.

ಸಂಗೊಳ್ಳಿ ರಾಯಣ್ಣನ ವೃತ್ತ ಹಾಗೂ ಮೂರ್ತಿ ಪ್ರತಿಷ್ಠಾಪಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಸಮಾಜದ ಏಳಿಗೆಗಾಗಿ ಸಂಘಟಿತರಾಗಿ ಹೋರಾಟ ಮಾಡಲು ಕರೆ ನೀಡಿದರು. ಈ ಮೂರ್ತಿಯನ್ನು ಅಂದಿನ ಪೊಲೀಸ್ ಅಧಿಕಾರಿಗಳಾದ ಡಿ.ಡಿ. ಮಾಳಗಿ ತಮ್ಮ ತಂದೆಯವರ ಸ್ಮರಣಾರ್ಥವಾಗಿ ದಾನವಾಗಿ ನೀಡಿದ್ದರು. ಅಂದು ನಡೆದ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿಗಳ ಕರೆಯಿಂದ ಪ್ರೇರಣೆಗೊಂಡ ಕುರುಬರ ಸಮಾಜವು ಸಂಘಟಿತರಾಗಿ ರಜತ ಮಹೋತ್ಸವದವರೆಗೆ ಹಲವಾರು ಸಾಧನೆಗಳ ಮೂಲಕ ಐತಿಹಾಸಿಕ ಹೆಜ್ಜೆ ಗುರುತುಗಳನ್ನು ಇಡುತ್ತಾ ಬಂದಿದೆ.

10-2-1999ರಂದು ಹಾತಲಗೇರಿ ನಾಕಾದಲ್ಲಿ ಕರ್ನಾಟಕ ರಾಜ್ಯದ ಅಂದಿನ ಉಪಮುಖ್ಯಮಂತ್ರಿ, ಹಿಂದುಳಿದ ವರ್ಗಗಳ ಅಭಿವೃದ್ಧಿಯ ನೇತಾರ ಸಿದ್ದರಾಮಯ್ಯನವರು ಸಂತಶ್ರೇಷ್ಠ ಭಕ್ತ ಕನಕದಾಸರ ವೃತ್ತವನ್ನು ಉದ್ಘಾಟಿಸಿದರು. ಅದೇ ದಿನ ಕನಕ ಭವನಕ್ಕೆ ಶಂಕುಸ್ಥಾಪನೆ ಕೈಗೊಂಡರು. ಇದು ರಾಜ್ಯದಲ್ಲಿಯೇ ಮೊದಲನೆಯ ಕನಕ ಭವನ ಎನ್ನುವುದು ಹೆಮ್ಮೆಯ ವಿಷಯ. ಈ ಕಟ್ಟಡದ ಕಾಮಗಾರಿಯನ್ನು ದಿ.05-04-2000ರಲ್ಲಿ ಬಳಗಾನೂರಿನ ಮೌನ ತಪಸ್ವಿ ಚಿಕ್ಕೇನಕೊಪ್ಪದ ಶರಣರು ಭೂಮಿಪೂಜೆ ನೆರವೇರಿಸುವದರೊಂದಿಗೆ ಕಾಮಗಾರಿ ಆರಂಭಿಸಲಾಯಿತು.

ಈ ಕನಕ ಭವನ ನಿರ್ಮಾಣಕ್ಕೆ ಪಕ್ಕೀರಪ್ಪ ಹೆಬಸೂರ, ಪರಶುರಾಮ ಎಲ್.ಕೊಪ್ಪದ ಹಾಗೂ ಶಶಿಧರ ರೊಳ್ಳಿಯವರ ಅತ್ಯಂತ ನಿಕಟವರ್ತಿಗಳಾದ ಎಸ್.ಎಸ್.ಕೆ ಸಮಾಜದ ಪ್ರಮುಖರಾದ ಈಶ್ವರಸಾ ಮೆಹರವಾಡೆ ಅವರು ತಮ್ಮ ಅಜ್ಜನವರಾದ ಲಕ್ಷ್ಮಣಸಾ ಹಬೀಬ ಅವರ ಸವಿನೆನಪಿಗಾಗಿ ಭೂಮಿದಾನ ನೀಡಿದರು. ನಂತರ ದಿ.15-04-2000ರಂದು ಗದಗ ತಾಲೂಕು ಕುರುಬರ ಸಂಘವು ಅಸ್ತಿತ್ವಕ್ಕೆ ಬಂದಿತು. ಸಮಾಜದ ಸರ್ವತೋಮುಖ ಏಳಿಗೆಯನ್ನು ಗುರಿಯಾಗಿಸಿಕೊಂಡು ಸಮಾಜದ ಹಿರಿಯರೆಲ್ಲ ಚಿಂತನೆ ಮಾಡಿ ದೊಡ್ಡದಾದ ಸಮಾಜದ ಒಗ್ಗಟ್ಟಿನ ಕೊರತೆಯನ್ನು ಮನಗಂಡು ಸಮಾಜವನ್ನು ಅಭಿವೃದ್ಧಿ ಪಥದತ್ತ ಕೊಂಡೊಯ್ಯುವ ಆಶಯದೊಂದಿಗೆ ಸಂಘವನ್ನು ಸ್ಥಾಪಿಸಲಾಯಿತು.

ಸಂಘದ ಸಂಸ್ಥಾಪಕರುಗಳಾದ ಫಕ್ಕೀರಪ್ಪ ಹೆಬಸೂರ ಗೌರವಾಧ್ಯಕ್ಷರಾಗಿ, ಪರಶುರಾಮ ಎಲ್.ಕೊಪ್ಪದ ಅಧ್ಯಕ್ಷರಾಗಿ, ಶಶಿಧರ ರೊಳ್ಳಿಯವರ ಸಂಘ ಸ್ಥಾಪನೆಯ ರೂವಾರಿಗಳಾದರು. ಸಂಘದ ಉಪಾಧ್ಯಕ್ಷರುಗಳಾಗಿ ಮಾದೇವಪ್ಪ ರೊಳ್ಳಿ, ಡಿ.ಎಚ್. ಗೋಣೆಪ್ಪನವರ, ಕಾಳಪ್ಪ ಸಿಂದಿಗೇರಿ, ಯಲ್ಲಪ್ಪ ಗುರಿಕಾರ, ಮಲ್ಲಪ್ಪ ಕುರಿ, ವಿ.ವೈ. ಮಕ್ಕಣ್ಣವರ, ಎಚ್.ಎಫ್. ಅಗಸಿಮನಿ, ಮಾರುತಿ ಮಡ್ಡಿ, ಶರಣಪ್ಪ ಬೆಟಗೇರಿ ಅವರನ್ನೊಳಗೊಂಡ ಸಂಘವು ಅಸ್ತಿತ್ವಕ್ಕೆ ಬಂದ ನಂತರ ಪದಾಧಿಕಾರಿಗಳೆಲ್ಲ ಸಕ್ರಿಯರಾಗಿ ಕಾರ್ಯನಿರ್ವಹಿಸಿ ಅನೇಕ ರಾಜಕೀಯ ಧುರೀಣರನ್ನು ಭೇಟಿಯಾಗಿ ಕನಕ ಭವನ ನಿರ್ಮಾಣಕ್ಕೆ ಧನಸಂಗ್ರಹ ಮಾಡಿದರು.

ಸಂಘದ ಇಂದಿನ ಅಧ್ಯಕ್ಷ ಪಕ್ಕೀರಪ್ಪ ಹೆಬಸೂರ, ಪ್ರಧಾನ ಕಾರ್ಯದರ್ಶಿ ರಾಮಪ್ಪ ನಿಂಬನಾಯ್ಕರ, ನಿರ್ದೇಶಕರುಗಳಾದ ವಿ.ವೈ. ಮಕ್ಕಣ್ಣವರ, ಫಕೀರಪ್ಪ ಅಗಸಿಮನಿ, ಎಸ್.ಆರ್. ರೊಳ್ಳಿ, ಶರಣಪ್ಪ ಬೆಟಗೇರಿ, ಯಲ್ಲಪ್ಪ ಗುರಿಕಾರ, ಡಾ. ಡಿ.ಸಿ. ಗಡ್ಡಿ, ರೇವಣಪ್ಪ ಕೊಂಡಿಕೊಪ್ಪ, ಬಸಪ್ಪ ಶಿರೂರ, ನಾಗಪ್ಪ ಗುಗ್ಗರಿ, ಚಂದ್ರು ಹಳ್ಳಿ, ಮೋಹನ ಇಮರಾಪೂರ, ಯಲ್ಲಪ್ಪ ಬಾನಾಪೂರ, ಶಿವಪ್ಪ ಸಿಂಗಟಾಲಕೇರಿ, ವೈ.ಎಸ್. ಜೋಗಿನ, ಗೂಳಪ್ಪ ಗುಡದೂರ, ಬಸಮ್ಮ ಕಂಬಳಿ, ಸಿದ್ದಪ್ಪ ಡಂಬಳ, ಮಾರುತಿ ಮಡ್ಡಿ, ಹುಚ್ಚಣ್ಣ ಶ್ಯಾಪೂರ ಅವರುಗಳು ಸಮಾಜವನ್ನು ಸಂಘಟಿಸಲು ಕಾರ್ಯನಿರತರಾಗಿದ್ದಾರೆ.

ಕನಕ ಭವನ ನಿರ್ಮಾಣಕ್ಕೆ ಗದಗ ಜಿ.ಪಂ ವತಿಯಿಂದ ಹಾಗೂ ಅಂದಿನ ಕೆಪಿಎಸ್‌ಸಿ ಸದಸ್ಯರಾದ ಕೆ. ಮುಖಡಪ್ಪ, ಧಾರವಾಡ ಲೋಕಸಭಾ ಸದಸ್ಯರಾದ ವಿಜಯ ಸಂಕೇಶ್ವರ, ರಾಜ್ಯಸಭಾ ಸದಸ್ಯರುಗಳಾದ ಪ್ರೊ. ಲಕ್ಷ್ಮಿ ಸಾಗರ, ಬಳ್ಳಾರಿಯ ಕೆ.ಸಿ. ಕೊಂಡಯ್ಯ, ಎಸ್.ಆರ್. ಬೊಮ್ಮಾಯಿ, ಜವರೇಗೌಡ ಜಿ.ಸಿ, ವಿಧಾನ ಪರಿಷತ್ ಸದಸ್ಯರುಗಳಾದ ಹುಬ್ಬಳ್ಳಿಯ ಎ.ಎಂ. ಹಿಂಡಿಸಗೇರಿ, ಎಚ್.ಕೆ. ಪಾಟೀಲ, ಶಾಸಕರಾದ ಡಿ.ಆರ್. ಪಾಟೀಲ ಸೇರಿದಂತೆ ಇನ್ನೂ ಹಲವರ ನೆರವಿನಿಂದ ಸುಂದರವಾದ ಕಟ್ಟಡ ನಿರ್ಮಾಣಕಾರ್ಯ ಆರಂಭಗೊಂಡಿತು.

4-03-2004ರಲ್ಲಿ ಕನಕ ಭವನವನ್ನು ಸಿದ್ದರಾಮಯ್ಯನವರು ಲೋಕಾರ್ಪಣೆ ಮಾಡಿದರು. ಅಂದು ಉದ್ಘಾಟನೆಗೊಂಡ ಕನಕ ಭವನವು 25 ವಸಂತಗಳನ್ನು ಪೂರೈಸಿ ರಜತ ಮಹೋತ್ಸವ ಆಚರಿಸಿಕೊಳ್ಳುತ್ತಿರುವುದು ನಮಗೆಲ್ಲ ಅತ್ಯಂತ ಸಂತೋಷದಾಯಕವಾದ ವಿಷಯವಾಗಿದೆ. ಇತ್ತೀಚೆಗೆ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅನುದಾನದಿಂದ ಕನಕಭವನದ ಪಕ್ಕದಲ್ಲಿ ಹೆಚ್ಚುವರಿ ಸಭಾಭವನನ್ನು ದಿ.ರಾಕೇಶ ಸಿದ್ಧರಾಮಯ್ಯ ಅವರ ಹೆಸರಿನಲ್ಲಿ ನಿರ್ಮಿಸಲಾಗಿದೆ.

ಸಂಘದ ಏಳಿಗೆಗೆ ಕಾರಣಿಕರ್ತರಾದ ಸಂಘದ ಸ್ಥಾಪಕ ಪದಾಧಿಕಾರಿಗಳು ಹಾಗೂ ನಂತರದ ಕೆಲ ಪದಾಧಿಕಾರಿಗಳಾದ ದಿ. ಪರಶುರಾಮ ಎಲ್.ಕೊಪ್ಪದ, ದಿ. ಮಹಾದೇವಪ್ಪ ರೊಳ್ಳಿ, ದಿ.ಕಾಳಪ್ಪ ಸಿಂದಿಗೇರಿ, ದಿ. ದೇವೇಂದ್ರಪ್ಪ ಗೋಣೆಪ್ಪನವರ, ದಿ.ಮಲ್ಲಪ್ಪ ಕುರಿ, ದಿ. ಕೆ.ಬಿ. ತಳಗೇರಿ ಇವರು ನಮ್ಮನ್ನಗಲಿದ್ದರೂ, ಅವರು ಮಾಡಿದ ಸಮಾಜಸೇವೆ ಹೆಜ್ಜೆ ಗುರುತುಗಳಾಗಿ ಉಳಿದುಕೊಂಡಿವೆ. ನಮ್ಮೆಲ್ಲರ ಹೆಮ್ಮೆಯ ಗದಗ ತಾಲೂಕ ಕುರುಬರ ಸಂಘವು 25 ವಸಂತಗಳನ್ನು ಪೂರೈಸಿ, 26ನೇ ವಸಂತಕ್ಕೆ ಕಾಲಿರಿಸಿದೆ. ಈ ಶುಭ ಸಂದರ್ಭದಲ್ಲಿ ಕಾರ್ಯಕ್ರಮಕ್ಕೆ ಆಗಮಿಸಲಿರುವ ನಾಡ ದೊರೆ, ಬಡವರ ಪಾಲಿನ ದೇವರೆಂದು ಹೆಸರಾಗಿರುವ ಸಿದ್ದರಾಮಯ್ಯನವರಿಗೆ ಸಮಸ್ತ ಸಮಾಜದ ಬಂಧುಗಳ ಪರವಾಗಿ ಅವರೆಲ್ಲ ಅಭಿಮಾನಗಳ ಪರವಾಗಿ ಅಭಿನಂದನೆಗಳನ್ನು ಸಲ್ಲಿಸುತ್ತೇವೆ. ಅಲ್ಲದೇ, ಅವರ ಸಚಿವ ಸಂಪುಟದ ಸದಸ್ಯರಿಗೆ ಹೃದಯಪೂರ್ವಕ ಅಭಿನಂದನೆಗಳನ್ನು ಸಲ್ಲಿಸುತ್ತೇವೆ. 25 ವರ್ಷಗಳ ಹಿಂದೆ ಸ್ಥಾಪಿತವಾದ ಸಂಘವು ಕಳೆದ 25 ವರ್ಷಗಳಲ್ಲಿ ಅನೇಕ ಸಾಮಾಜಿಕ ಕಾರ್ಯಗಳನ್ನು ಕೈಗೊಂಡಿದೆ. ಅದಕ್ಕೆ ತಮ್ಮೆಲ್ಲರ ಸಹಾಯ, ಸಹಕಾರ ಬೆಂಬಲವೇ ಕಾರಣ ಮುಂದೆಯೂ ಕೂಡ ಸಂಘವು ಸಮಾಜದ ಏಳಿಗೆಯ ಕುರಿತು ಕೈಗೊಳ್ಳುವ ಕಾರ್ಯಗಳಿಗೆ ತಾವೆಲ್ಲ ಬೆನ್ನೆಲುಬಾಗಿ ನಿಂತು ಬೆಂಬಲಿಸುತ್ತಿರೆಂದು ನಂಬಿದ್ದೇವೆ.

ಮೌರ್ಯ ಸಾಮ್ರಾಜ್ಯದ ಸ್ಥಾಪನೆಯಿಂದ ಹಿಡಿದು ಜಗತ್ತಿನ ಶ್ರೇಷ್ಠ ಸಾಮ್ರಾಜ್ಯಗಳೊಂದಾದ ವಿಜಯನಗರ ಸಾಮ್ರಾಜ್ಯ ಸ್ಥಾಪನೆ ಮಾಡಿದ ಹಕ್ಕ-ಬುಕ್ಕರು ನಮ್ಮ ಸಮಾಜದವರು ಎಂಬುದು ಹೆಮ್ಮೆಯ ಸಂಗತಿ. ಉತ್ತರ ಭಾರತದಲ್ಲಿಯೇ ಅನೇಕ ಹಿಂದೂ ದೇವಾಲಯಗಳ ನಿರ್ಮಾಣ ಹಾಗೂ ವಾರಣಾಸಿಯ ಕಾಶಿ ವಿಶ್ವನಾಥ ದೇವಾಲಯ ಪುನರ ನಿರ್ಮಿಸಿದ ರಾಜಮಾತಾ ಅಹಲ್ಯಾಬಾಯಿ ಹೊಳ್ಕರ್ ಈ ಸಮಾಜದ ಧ್ರುವತಾರೆ ಎನಿಸಿದ್ದಾರೆ. ಧರ್ಮದಲ್ಲಿ ಇಟಗಿ ಭೀಮಾಂಬಿಕೆ, ಭಕ್ತಿಯಲ್ಲಿ ಸಜ್ಜಲಗುಡ್ಡದ ಶರಣಮ್ಮ, ಛಲವಂತ ಮಾಳಿಂಗರಾಯ, ಮುಗುಳಖೋಡದ ಯಲ್ಲಾಲಿಂಗ ಮಹಾರಾಜರು, ಸಿದ್ಧರಲ್ಲಿ ಅಮೋಘಸಿದ್ಧ, ಬಳ್ಳಾರಿಯ ಗಾದಿಲಿಂಗ, ಮಲೆ ಮಹದೇಶ್ವರ ಬೆಟ್ಟದ ಮಲೆ ಮಹದೇಶ್ವರ ದೇವಾಲಯ ನಿರ್ಮಾತೃ ಜುಂಜೇಗೌಡರು, ಬಾಳು ಮಾಮಾ, ಇತ್ತೀಚೆಗೆ ಆಗಿ ಹೋದ ಲಡ್ಡು ಮುತ್ಯಾ ಹೀಗೆ ಇನ್ನೂ ಅನೇಕ ಪವಾಡ ಪುರುಷರು ಈ ಸಮಾಜದಲ್ಲಿ ಬೆಳಕಾಗಿ ಹೋಗಿದ್ದಾರೆ.

ಯಾವುದೇ ಮಂಗಳ ಕಾರ್ಯಕ್ಕೆ ಮೊದಲು ಕುರುಬರಾಗಬೇಕೆಂದು ಎಲ್ಲ ಸಮಾಜದವರು ನಂಬಿದ ಶ್ರೇಷ್ಠ ಸಮಾಜ ನಮ್ಮದು. ಶುಭಕಾರ್ಯಗಳಿಗೆ ಜೀವಂತ ಪ್ರಾಣಿಯಿಂದ ತೆಗೆದ ಕುರಿ ಉಣ್ಣೆಯ ಕಂಬಳಿ ಶ್ರೇಷ್ಠ ಗದ್ದುಗೆಯಾಗಿದೆ. ಇಂತಹ ಸಮಾಜದಲ್ಲಿ ಜನಿಸಿದ ಇಡಿ ಏಷ್ಯಾದಲ್ಲಿಯೇ ಪ್ರಪ್ರಥಮ ಸಹಕಾರ ಸಂಘ ಸ್ಥಾಪಿಸಿದ ಸಹಕಾರ ರಂಗದ ಪಿತಾಮಹ ಸಣ್ಣರಾಮನಗೌಡ ಸಿದ್ದನಗೌಡ ಪಾಟೀಲರಂತಹ ಹಿರಿಯರನ್ನು ಹೊಂದಿರುವ ನಾವೆಲ್ಲರೂ ಪುಣ್ಯವಂತರು. ಈ ಸಮಾಜದ ಏಳಿಗೆಗೆ ತಾವೆಲ್ಲ ಕಟ್ಟಿಬದ್ಧರಾಗಿ ಕಾರ್ಯ ಮಾಡುತ್ತೀರೆಂಬ ಆಶಯದೊಂದಿಗೆ.

-ವೆಂಕಟೇಶ ಬಿ. ಇಮರಾಪೂರ. ಗದಗ.

### ಪತ್ರಿಕಾಗೋಷ್ಠಿಯಲ್ಲಿ ಬಾಗಲಕೋಟಿ ಜಾಗತಿಕ ಲಿಂಗಾಯತ ಮಹಾಸಭಾ ಜಿಲ್ಲಾಧ್ಯಕ್ಷ ಅಶೋಕ ಬರಗುಂಡಿ ಮಾಹಿತಿ

# ಧರ್ಮದ ಕಾಲಂನಲ್ಲಿ ಲಿಂಗಾಯತ ಎಂದೇ ಬರೆಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಲಿಂಗಾಯತ ಪ್ರತ್ಯಕ ಧರ್ಮ ಅಂತ ಬರೆಯಿಸುವುದರಿಂದ ಮುಂದಿನ ದಿನಗಳಲ್ಲಿ ಲಿಂಗಾಯತರು ಅಲ್ಪಸಂಖ್ಯಾತರಲ್ಲಿ ಸ್ಥಾನ ಪಡೆಯುವ ಸಾಧ್ಯತೆ ಇದೆ. ಧರ್ಮದ ಕಾಲಂನಲ್ಲಿ ಲಿಂಗಾಯತ ಅಂತ ಬರೆಯಿಸಬೇಕು. ಉಪ ಜಾತಿಗಳ ಕಾಲಂನಲ್ಲಿ ನಿಮ್ಮ ನಿಮ್ಮ ಉಪ ಜಾತಿ ನಮೂದಿಸಬೇಕು. ಕೇಲವೊಂದಿಷ್ಟು ಮಠಾಧೀಶರು ಈ ಬಗ್ಗೆ ಅಪಪ್ರಚಾರ ಮಾಡುತ್ತಿದ್ದು, ಅವರ ಮಾತಿಗೆ ಕಿವಿಗೊಡದೇ ಲಿಂಗಾಯತರೆಲ್ಲರೂ ಧರ್ಮದಲ್ಲಿ ಲಿಂಗಾಯತ ಎಂದೇ ನಮೂದಿಸಬೇಕು ಎಂದು ಬಾಗಲಕೋಟಿ ಜಾಗತಿಕ ಲಿಂಗಾಯತ ಮಹಾಸಭಾ ಜಿಲ್ಲಾಧ್ಯಕ್ಷ ಅಶೋಕ ಬರಗುಂಡಿ ಕರೆ ನೀಡಿದರು.




ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, 2ಎ ಎಂದು ಬರೆಸಿದರೆ ಶೇ. 15 ಇರುವದರಿಂದ ಮೀಸಲಾತಿ ದೊರೆಯುವುದು ಹೆಚ್ಚು ಸಾಧ್ಯ ಎಂದು ಹೇಳುವವರು ಮಾಡುವ ತಪ್ಪು ಎಂದರೆ, 2ಎದಲ್ಲಿ 104 ಜಾತಿಗಳಿವೆ. ಅಂದರೆ ಸ್ಪರ್ಧೆ ಹೆಚ್ಚು ಇರುತ್ತದೆ. ಸೌಲಭ್ಯ ದೊರೆಯುವ ಸಾಧ್ಯತೆ ಕಡಿಮೆ. 3ಬಿಯಲ್ಲಿ ಕೇವಲ ಶೇ. 5 ರಿಜರ್ವೇಶನ್ ಇದ್ದರೂ ಆ ಗುಂಪಿನಲ್ಲಿ ಕೇವಲ 28ರಷ್ಟು ಮಾತ್ರ ಜಾತಿಗಳಿವೆ. ಹೀಗೆ 3ಬಿಯಲ್ಲಿ ಇರುವ 28 ಜಾತಿಗಳಿಗಿಂತ 2ಎದಲ್ಲಿರುವ 104 ಜಾತಿಗಳಿಗೆ ಹೋಲಿಸಿದರೆ 3ಬಿಯಲ್ಲಿ ಸುಮಾರು 4 ಪಟ್ಟು ಜಾತಿಗಳ ಸಂಖ್ಯೆ ಕಡಿಮೆ ಇದೆ. ಹೀಗೆ ಮೀಸಲಾತಿ ಸೌಲಭ್ಯ ದೊರೆಯುವ ಸಾಧ್ಯತೆ ಹೆಚ್ಚು ಇರುತ್ತದೆ ಎಂದರು.

ಯಾವುದೇ ಜಾತಿ, ಯಾವುದೇ ಧರ್ಮದ ಗುಂಪಿನಲ್ಲಿ ಮತ್ತು ಎಸ್ಸಿ/ಎಸ್‌ಟಿ ಗುಂಪುಗಳಲ್ಲಿ ನಿಮ್ಮ ಜಾತಿ ಅಥವಾ ಧರ್ಮದ ಹೆಸರು ಇರದಿದ್ದರೆ ನೀವು ಸಂತೋಷ ಪಡಬೇಕು. ಏಕೆಂದರೆ, ನಿಮ್ಮ ಕುಟುಂಬದ ವಾರ್ಷಿಕ ಆದಾಯ 8 ಲಕ್ಷ ರೂ.ಗಳಿಗಿಂತ ಕಡಿಮೆ ಇದ್ದರೆ ನಿಮಗೆ ಶೇ. 10 ವಿಶೇಷ ರಿಜರ್ವೇಶನ್ ಸೌಲಭ್ಯ ಲಭ್ಯವಿದೆ ಎಂಬುದನ್ನು ನೆನಪಿಡಿ. ಹೀಗಾಗಿ, ಧರ್ಮದ ಕಾಲಂನಲ್ಲಿ ಲಿಂಗಾಯತ ಎಂದು ಬರೆಸಿದರೆ ಯಾವ ವ್ಯತ್ಯಾಸವೂ ಆಗುವದಿಲ್ಲ. ಆದ್ದರಿಂದ ಈಗ ನಡೆಯುತ್ತಿರುವ ಕರ್ನಾಟಕ ಸರ್ಕಾರದ ಸಾಮಾಜಿಕ ಆರ್ಥಿಕ ಸಮೀಕ್ಷೆಯಲ್ಲಿ ನಿಮ್ಮ ಧರ್ಮ 'ಲಿಂಗಾಯತ' ಎಂದು ಬರೆಸಿರಿ. ಅದರಿಂದ ಯಾವುದೇ ಹಾನಿ ಇಲ್ಲ ಎಂದು ಮನವರಿಕೆ ಮಾಡಿದರು.

ಪ್ರೊ. ಎಸ್.ಎಸ್. ಪಟ್ಟಣಶೆಟ್ಟಿ ಮಾತನಾಡಿ, ಲಿಂಗಾಯತ ಮತ್ತು ವೀರಶೈವ ಬೇರೆ ಬೇರೆಯಾಗಿದೆ. ಇವೆರೆಡು ಎಣ್ಣೆ ಮತ್ತು ನೀರು ಇದ್ದಂತೆ. ಒಂದಾಗಲು ಸಾಧ್ಯವೇ ಇಲ್ಲ. ಲಿಂಗಾಯತರ ಧರ್ಮ ಗುರುಗಳು ಬಸವಣ್ಣನವರಾಗಿದ್ದಾರೆ. ಜಾತಿ ತಾರತಮ್ಯ ಇಲ್ಲದ ಸಮ ಸಮಾಜ ನಿರ್ಮಿಸುವುದು ಬಸವಣ್ಣನವರ ಕನಸಾಗಿತ್ತು. ಇದನ್ನು ಜಗತ್ತಿಗೆ ತಲುಪಿಸಲು ಸಾಧ್ಯವಾಗಲಿಲ್ಲ. ಬೌದ್ಧ ಧರ್ಮಕ್ಕೆ ರಾಜರು ಆಶ್ರಯ ನೀಡಿದರು. ಅದು ಜಗತ್ತಿನಾದ್ಯಂತ ವಿಸ್ತಾರಗೊಂಡಿತು. ಆದರೆ, ಬಸವಣ್ಣನವರಿಗೆ ಆಶ್ರಯ ಸಿಗದೇ ಇರುವುದು ದುರ್ದೈವದ ಸಂಗತಿಯಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಈ ವೇಳೆ ಕೆ.ಎಸ್. ಚೆಟ್ಟಿ, ಪಿ.ಕೆ. ಕರಿಗೌಡ್ರ, ಬಾಲಚಂದ್ರ ಭರಮಗೌಡ್ರ, ಶ್ರೀದೇವಿ ಶೆಟ್ಟರ, ಬಸವರಾಜ ಹಿರೇಹಡಗಲಿ, ಈಶಣ್ಣ ಮುನವಳ್ಳಿ, ಪ್ರಕಾಶ ಅಸುಂಡಿ, ಡಾ. ಜಿ.ಬಿ. ಪಾಟೀಲ, ಗೌರಮ್ಮ ಬಡಿಗಣ್ಣನವರ ಉಪಸ್ಥಿತರಿದ್ದರು.

# ಎಂ.ಡಿ. ಯೂಸೂಫ್ ಡಂಬಳ ಮತ ಯಾಚನೆ

■ವಿಜಯಸಾಕ್ಷಿ ಸುದ್ದಿ, ಗದಗ



ಅಂಜುಮನ್-ಎ-ಇಸ್ಲಾಂ ಕಮಿಟಿ ಗದಗ-ಬೆಟಗೇರಿ ಆಡಳಿತ ಮಂಡಳಿಯ ಸದಸ್ಯತ್ವ ಚುನಾವಣೆ ಸೆ.28ರಂದು ನಡೆಯಲಿದ್ದು, ಪಕ್ಷೇತರ ಅಭ್ಯರ್ಥಿಯಾದ ಎಂ.ಡಿ. ಯೂಸೂಫ್ ಡಂಬಳ ಪ್ರಚಾರ ಕಾರ್ಯ ಕೈಗೊಂಡರು.

ರಾಜೀವಗಾಂಧಿ ನಗರದ ಮಸೀದಿಯಲ್ಲಿ ನಡೆದ ಪ್ರಚಾರ ಸಭೆಯಲ್ಲಿ ಅವರು ಮಾತನಾಡಿ, ಅಂಜುಮನ್-ಎ-ಇಸ್ಲಾಂ ಕಮಿಟಿ ಗದಗ-ಬೆಟಗೇರಿಯ ಅಭಿವೃದ್ಧಿಗಾಗಿ ನಾನು ಸಂಸ್ಥೆಯ ಸುಧಾರಣೆಗಾಗಿ ಈ ಬಾರಿ ಸ್ಪರ್ಧಿಸುತ್ತಿದ್ದು, ನನ್ನ ಚುನಾವಣೆಯ ಗುರುತು ಕ್ರಮ ಸಂಖ್ಯೆ :30, ಸಿಸಿಟಿವಿ ಕ್ಯಾಮರಾದ ಗುರುತಿಗೆ ತಮ್ಮ ಮತವನ್ನು ನೀಡಿ ನನ್ನನ್ನು ಆಯ್ಕೆ ಮಾಡಿ ತಮ್ಮ ಸೇವೆ ಮಾಡಲು ಅವಕಾಶ ನೀಡಬೇಕು ಎಂದು ವಿನಂತಿ ಮಾಡಿಕೊಂಡರು.

# ಕ್ರೀಡೆಗಳಿಂದ ದೈಹಿಕ ಸ್ಥಿರತೆ



■ವಿಜಯಸಾಕ್ಷಿ ಸುದ್ದಿ, ಗದಗ

ಕ್ರೀಡೆಗಳು ಮಕ್ಕಳಲ್ಲಿ ಸ್ಪರ್ಧಾತ್ಮಕ ಮನೋಭಾವದೊಂದಿಗೆ ಸೃಜನಶೀಲತೆಯನ್ನು ಮೂಡಿಸುತ್ತವೆ. ಆಟ ಹಾಗೂ ಪಾಠಗಳು ವಿದ್ಯಾರ್ಥಿ ಜೀವನಕ್ಕೆ ಪ್ರೇರಣೆ ನೀಡುವ ಮೂಲಕ ವಿದ್ಯಾರ್ಥಿಗಳಲ್ಲಿ ದೈಹಿಕ ಹಾಗೂ ಮಾನಸಿಕ ಸ್ಥಿರತೆಯನ್ನು ಒದಗಿಸುತ್ತವೆ ಎಂದು ಸಂಪನ್ಮೂಲ ವ್ಯಕ್ತಿ ಕವಿತಾ ಬೇಲೇರಿ ಹೇಳಿದರು.

ಅವರು ಗದುಗಿನ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ನಂ. 3ರಲ್ಲಿ ಗದುಗಿನ ಶಿಕ್ಷಣ ಪ್ರೇಮಿಗಳಾದ ಅನಂತ ಧ್ಯಾನ ಪರಿವಾರ ಇವರು ಶಾಲೆಗೆ ಕೊಡಮಾಡಿದ ಒಳಾಂಗಣ ಕ್ರೀಡಾ ಸಾಮಗ್ರಿಗಳನ್ನು ವಿತರಿಸಿ ಮಾತನಾಡಿದರು.

ವಿದ್ಯಾರ್ಥಿಗಳಿಗೆ ಮನರಂಜನೆ ಮುಖ್ಯ. ದಾನಿಗಳು ಸರಕಾರಿ ಶಾಲೆಗಳ ಮೇಲಿನ ಅಭಿಮಾನದಿಂದ ಶೈಕ್ಷಣಿಕವಾಗಿ ಬೆಂಬಲಿಸಲು ಕ್ರೀಡಾ ಸಾಮಗ್ರಿಗಳನ್ನು ವಿತರಿಸುವ ಮೂಲಕ ಶೈಕ್ಷಣಿಕ ಅಭಿವೃದ್ಧಿಗೆ ಕೈಜೋಡಿಸಿರುವದು ಮಾದರಿ ಕಾರ್ಯ ಎಂದರು.

ಶಾಲಾ ಮುಖ್ಯೋಪಾಧ್ಯಾಯೆ ಪಿ.ಎಸ್. ಮಣ್ಣೂರ ಮಾತನಾಡಿ, ಸರಕಾರಿ ಶಾಲಾ ಮಕ್ಕಳ ಸರ್ವತೋಮುಖ ಅಭಿವೃದ್ಧಿಯೇ ನಮ್ಮೆಲ್ಲರ ಗುರಿಯಾಗಿದೆ. ಸರಕಾರದ ಉಚಿತ ಯೋಜನೆಗಳೊಂದಿಗೆ ಚಿಂತಕರು ಸರಕಾರಿ ಶಾಲಾ ಮಕ್ಕಳಿಗೆ ನೀಡುವ ವಿವಿದ ಕೊಡಗೆಗಳು ವಿದ್ಯಾರ್ಥಿಗಳಲ್ಲಿ ಶೈಕ್ಷಣಿಕ ಗುಣಮಟ್ಟ ಹೆಚ್ಚಿಸಲು ಸಹಾಯಕವಾಗುತ್ತವೆ ಎಂದರಲ್ಲದೆ, ಕ್ರೀಡಾ ಸಾಮಗ್ರಿಗಳನ್ನು ವಿತರಿಸಿದ ದಾನಿಗಳಿಗೆ ಧನ್ಯವಾದ ಅರ್ಪಿಸಿದರು.

ಎಸ್.ಎಸ್. ಹಿರೇಮಠ ಸ್ವಾಗತಿಸಿದರು, ಜೆ.ಕೆ. ಕಾಳೆ ನಿರೂಪಿಸಿದರು. ಎಸ್.ಬಿ. ಬಾಗೂರ ವಂದಿಸಿದರು.

### ಕಲಾವಿಕಾಸ ಪರಿಷತ್‌ನಿಂದ ಪಂ. ಪುಟ್ಟರಾಜರ 15ನೇ ಪುಣ್ಯಸ್ಮರಣೆ

# ಪುಟ್ಟರಾಜ ಗವಾಯಿಗಳು ನೋಬೆಲ್ ಪ್ರಶಸ್ತಿಗೆ ಅರ್ಹರು

■ವಿಜಯಸಾಕ್ಷಿ ಸುದ್ದಿ, ಗದಗ

ಅಂಧ, ಅನಾಥ ಮಕ್ಕಳಿಗೆ ತಂದೆಯಾಗಿ, ಪೋಷಕರಾಗಿ, ಸಂಗೀತದ ಗುರುವಾಗಿ, ಪುರಾಣ ಪ್ರವಚನಕ್ಕೆ ಪ್ರೇರಕರಾಗಿ, ದಿಕ್ಕಿಲ್ಲದ ಮಕ್ಕಳಿಗೆ ಬದುಕುವ ವಿದ್ಯೆ ನೀಡಿದ ಪಂಡಿತ ಪುಟ್ಟರಾಜ ಗವಾಯಿಗಳು ನೋಬೆಲ್ ಪ್ರಶಸ್ತಿಗೆ ಅರ್ಹರಾಗಿದ್ದರು. ಅವರ ಸಾಹಿತ್ಯ ಕಣ್ಣಿದ್ದವರನ್ನೂ ಬೆರಗುಗೊಳಿಸಿತ್ತು ಎಂದು ಅನ್ನದಾನಿ ಹಿರೇಮಠ ಹೇಳಿದರು.



ಚಿಕ್ಕಟ್ಟಿ ಸಮೂಹ ಶಿಕ್ಷಣ ಸಂಸ್ಥೆಯ ಸಭಾಂಗಣದಲ್ಲಿ ಗದುಗಿನ ಕಲಾವಿಕಾಸ ಪರಿಷತ್ತಿನವರು ಏರ್ಪಡಿಸಿದ ಪಂಡಿತ ಪುಟ್ಟರಾಜ ಗವಾಯಿಗಳ 15ನೇ ಪುಣ್ಯ ಸ್ಮರಣೆಯನ್ನು ಉದ್ಘಾಟಿಸಿ ಮಾತನಾಡಿದರು.

ಮುಖ್ಯ ಅತಿಥಿಯಾಗಿ ಭಾವಹಿಸಿದ್ದ ವಿಭೂತಿ ಪತ್ರಿಕೆ ಸಂಪಾದಕ, ಹಿರಿಯ ಸಾಹಿತಿ ಅಂದಾನೆಪ್ಪ ವಿಭೂತಿ ಮಾತನಾಡಿ, ಪುಟ್ಟರಾಜ ಗವಾಯಿಗಳು ಲಿಂಗೈಕ್ಯರಾದ ಸಂದರ್ಭದಲ್ಲಿ ಗದಗ-ಬೆಟಗೇರಿ ಜನರು ಜಾತ್ಯಾತೀತವಾಗಿ ಭಕ್ತಿಯಿಂದ ಅಂತಿಮ ನಮನದಲ್ಲಿ ಸೇವೆ ಸಲ್ಲಿಸಿದ್ದನ್ನು ಸ್ಮರಿಸಿಕೊಂಡರು.

ಚಿಕ್ಕಟ್ಟಿ ಸಿಬಿಎಸ್‌ಸಿ ಶಾಲೆಯ ವಿದ್ಯಾರ್ಥಿಗಳು ಪ್ರಾರ್ಥಿಸಿದರು. ಡಾ. ಪಂಡಿತ ಪುಟ್ಟರಾಜ ಸೇವಾ ಸಮಿತಿಯ ಅಧ್ಯಕ್ಷ ಫಕ್ಕೀರೇಶ್ವರ ಶಾಸ್ತ್ರಿಗಳು ಹಿರೇಮಠ ಸ್ವಾಗತಿಸಿದರು. ಕಲಾವಿಕಾಸ ಪರಿಷತ್ತಿನ ಸಂಸ್ಥಾಪಕ ಅಧ್ಯಕ್ಷರಾದ ಪಂ. ಸಿ.ಕೆ.ಎಚ್ ಶಾಸ್ತ್ರಿಗಳು (ಕಡಣಿ) ಪ್ರಾಸ್ತಾವಿಕವಾಗಿ ಮಾತನಾಡಿದರು. ಶಿಕ್ಷಕ, ಸಾಹಿತಿ ಶ್ರೀಶೈಲ ಬಡಿಗೇರ ಪುಟ್ಟರಾಜ ಗುರುಗಳ ಕುರಿತು ಸ್ವರಚಿತ ಕವನಗಳನ್ನು ವಾಚಿಸಿದರು. ಇದೇ ಸಂದರ್ಭದಲ್ಲಿ ಕರ್ನಾಟಕ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯರಾಗಿ ನೇಮಕಗೊಂಡ ಜೆ.ಪಿ. ಶಿಕ್ಷಣ ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ಬಿ.ಬಿ. ಹೊಳಗುಂದಿ ಅವರನ್ನು ಸನ್ಮಾನಿಸಲಾಯಿತು.

ಭಾರತೀಯ ಶಿಕ್ಷಣ ಸಂಸ್ಥೆಯ ಸಂಸ್ಥಾಪಕರಾದ ಪ್ರೊ. ಎಸ್. ವಾಯ್. ಚಿಕ್ಕಟ್ಟಿ ಮಾತನಾಡಿ, ಪುಟ್ಟರಾಜ ಗವಾಯಿಗಳೊಂದಿಗಿನ ಒಡನಾಟವನ್ನು ನೆನಪಿಸಿಕೊಳ್ಳುವುದರಂದಿಗೆ ಕಲಾ ವಿಕಾಸ ಪರಿಷತ್‌ನ ಸಿ.ಕೆ.ಹೆಚ್. ಶಾಸ್ತ್ರಿಯವರು 15 ವರ್ಷಗಳಿಂದ ಪೂಜ್ಯರ ಪುಣ್ಯಸ್ಮರಣೆಯನ್ನು ನಮ್ಮ ಸಂಸ್ಥೆಯಲ್ಲಿ ಆಯೋಜಿಸುತ್ತಿರುವುದು ನಮ್ಮ ಸಂಸ್ಥೆಯ ಭಾಗ್ಯವಿಶೇಷವೆಂದು ಹೇಳಿದರು.

ವೇದಿಕೆಯಲ್ಲಿ ಬಿಬಿಎ ಕಾಲೇಜಿನ ಪ್ರಾಚಾರ್ಯ ಬಿಪಿನ್ ಚಿಕ್ಕಟ್ಟಿ, ಪ್ರಾ. ಶೋಭಾ ಸ್ಥಾವರಮಠ, ಪ್ರಾ. ರಿಯಾನಾ ಮುಲ್ಲಾ ಇದ್ದರು. ಶಿಕ್ಷಕಿ ರಜನಿ ಕುರಿ ಕಾರ್ಯಕ್ರಮ ನಿರೂಪಿಸಿದರು. ಶಿಕ್ಷಕ ಗಣೇಶ ಬಡ್ನಿ ವಂದಿಸಿದರು. ಸಿ.ಕೆ.ಹೆಚ್. ಶಾಸ್ತ್ರೀಯವರು ರಚಿಸಿದ ಪುಟ್ಟರಾಜ ಗುರುಗಳ ಗೀತೆಗಳ ಪ್ರದರ್ಶನ ಜರುಗಿತು.

# ಅಗ್ನಿವೀರರ ತರಬೇತಿ ಹೆಚ್ಚಿಸಿ



**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಕೇಂದ್ರ ಸರಕಾರವು ಅಗ್ನಿವೀರ ಯೋಜನೆಯಡಿಯಲ್ಲಿ ಸೈನಿಕರ ನೇಮಕವನ್ನು ಮಾಡುತ್ತಿದೆ. ಇದು ಸ್ತುತ್ಯಾರ್ಹ. ಆದರೆ ಅವರಿಗೆ ಕೇವಲ ಆರು ತಿಂಗಳ ತರಬೇತಿಯನ್ನು ನೀಡಿ ಅವರನ್ನು ಬೇರೆ ಬೇರೆ ಕಡೆಗಳಲ್ಲಿ ನಿಯೋಜಿಸುತ್ತಿದ್ದು, ತರಬೇತಿಯ ಕೊರತೆಯಿಂದ, ದೈಹಿಕ ಅಸಮರ್ಥತೆಯಿಂದ ಅವರು ಜೀವ ಕಳೆದುಕೊಂಡ ಉದಾಹರಣೆಗಳಿವೆ. ಆದ್ದರಿಂದ ಅವರ ತರಬೇತಿ ಅವಧಿಯನ್ನು ಹೆಚ್ಚಿಸಿ ನಂತರ ಅವರನ್ನು ಪೋಸ್ಟಿಂಗ್ ಮಾಡಬೇಕೆಂದು ನರೇಗಲ್ಲ ನಿವೃತ್ತ ಸೈನಿಕರ ಸಂಘವು ಕೇಂದ್ರ ಸರಕಾರವನ್ನು ಆಗ್ರಹಿಸಿದೆ.

ಈಚೆಗೆ ನಡೆದ ಅಧ್ಯಕ್ಷ ಶಿವಪುತ್ರಪ್ಪ ಸಂಗನಾಳ ಅವರ ಅಧ್ಯಕ್ಷತೆಯಲ್ಲಿ ಸಂಘದ ಮಾಸಿಕ ಸಭೆಯಲ್ಲಿ ಠರಾವನ್ನು ಪಾಸು ಮಾಡಿತು.

ಸೆಪ್ಟಂಬರ್ ತಿಂಗಳಿನಲ್ಲಿ ನಿವೃತ್ತರೆಲ್ಲರೂ ಜೀವಿತ ಪ್ರಮಾಣಪತ್ರವನ್ನು ನೀಡಬೇಕಿದ್ದು, ಅದನ್ನು ಸ್ಪರ್ಷ ಗುಂಪಿಗೆ ತಲುಪಿಸಿ ತಮ್ಮ ನಿವೃತ್ತಿ ವೇತನ ಸರಾಗವಾಗಿ ಬರುವಂತೆ ಮಾಡಿಕೊಳ್ಳಬೇಕು. ಈಗಾಗಲೆ ಕೆಲವರು ಕಳಿಸಿದ್ದು, ಇನ್ನೂ ಕಳಿಸದೇ ಇದ್ದವರು ಕೂಡಲೇ ತಲುಪಿಸುವಂತೆ ತಿಳಿಸಿದರು.

ಸಭೆಯಲ್ಲಿ ನಿವೃತ್ತ ಸೈನಿಕರಾದ ಶಿವಪ್ಪ ಶಿವಾಪುರ, ಪ್ರಭುದೇವ ಮುಕ್ಕನಗೌಡ್ರ, ಸಂಗಪ್ಪ ಕುಷ್ಟಗಿ, ಬಸವೇಶ್ವರ ಚಿಕ್ಕೊಪ್ಪದ, ಸಿದ್ರಾಮಪ್ಪ ಕಟ್ಟಿಮನಿ, ದಾದಾಸಾಬ ನದಾಫ್, ಈರಪ್ಪ ದೊಡ್ಡಣ್ಣವರ, ಶಿವಾನಮದ ಬಂಡಿಹಾಳ, ದಾವಲಸಾಬ ಕಿಲ್ಲೇದಾರ, ಶಶಿಕಾಂತ ಕರಡಿ, ಬಸವರಾಜ ಯಕ್ಕುಂಡಿ, ಉಮೇಶ ಕರಮುಡಿ ಮುಂತಾದವರು ಪಾಲ್ಗೊಂಡಿದ್ದರು.

**'ವಿಶ್ವ ಆತ್ಮಹತ್ಯೆ ತಡೆಗಟ್ಟುವ ದಿನಾಚರಣೆ-2025' ಕಾರ್ಯಕ್ರಮದಲ್ಲಿ ನ್ಯಾ.ಮೂ ಸಿ.ಎಸ್. ಶಿವನಗೌಡ್ರ ಕರೆ**

# ಯಾರೂ ಆತ್ಮಹತ್ಯೆಯ ನಿರ್ಧಾರಕ್ಕೆ ಬರಬೇಡಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಪ್ರಪಂಚದಾದ್ಯಂತ ಸೆಪ್ಟೆಂಬರ್ 10ರಂದು ವಿಶ್ವ ಆತ್ಮಹತ್ಯೆ ತಡೆ ದಿನಾಚರಣೆಯನ್ನು 2003ರಿಂದ ಆಚರಿಸಲಾಗುತ್ತಿದೆ. ಹೆಚ್ಚುತ್ತಿರುವ ಆತ್ಮಹತ್ಯೆಗಳನ್ನು ತಡೆಯುವುದು ಈ ದಿನಾಚರಣೆಯ ಗುರಿಯಾಗಿದೆ ಎಂದು ಹಿರಿಯ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡ್ರ ತಿಳಿಸಿದರು.



ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಗದಗ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಗದಗ, ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ಗದಗ, ಗದಗ ವೈದ್ಯಕೀಯ ಮಹಾವಿದ್ಯಾಲಯ-ಮನೋವೈದ್ಯಕೀಯ ವಿಭಾಗ ಗದಗ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಗದಗ, ಜಿಲ್ಲಾ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಗದಗ, ತಾಲೂಕಾ ಆರೋಗ್ಯಾಧಿಕಾರಿಗಳ ಕಾರ್ಯಾಲಯ ಗದಗ, ಹಾಗೂ ಕೆ.ಎಲ್.ಇ. ಸಂಸ್ಥೆಯ ಜಗದ್ಗುರು ತೋಂಟದಾರ್ಯ ಮಹಾವಿದ್ಯಾಲಯ-ಯುವ ರೆಡ್ ಕ್ರಾಸ್ ಘಟಕ ಗದಗ ಇವರುಗಳ ಸಂಯುಕ್ತ ಆಶ್ರಯದಲ್ಲಿ ಕೆ.ಎಲ್.ಇ ಸಂಸ್ಥೆಯ ಜಗದ್ಗುರು ತೋಂಟ-ದಾರ್ಯ ಮಹಾವಿದ್ಯಾಲಯದಲ್ಲಿ ಹಮ್ಮಿಕೊಂಡಿದ್ದ 'ವಿಶ್ವ ಆತ್ಮಹತ್ಯೆ ತಡೆಗಟ್ಟುವ ದಿನಾಚರಣೆ -2025' ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಇತ್ತೀಚಿನ ದಿನಗಳಲ್ಲಿ ಆತ್ಮಹತ್ಯೆ ಪ್ರಕರಣಗಳು ಹೆಚ್ಚಾಗಿ ಕಂಡುಬರುತ್ತಿದ್ದು, ಮುಖ್ಯವಾಗಿ ವಿದ್ಯಾರ್ಥಿಗಳಲ್ಲಿ ಹೆಚ್ಚುತ್ತಿರುವುದು ಕಳವಳಕಾರಿಯಾಗಿದೆ. ಜೀವನ ಅತ್ಯಮೂಲ್ಯವಾದುದು. ಆದ್ದರಿಂದ ಆತ್ಮಹತ್ಯೆಯ ನಿರ್ಧಾರಕ್ಕೆ ಬರಬೇಡಿ. ಆತ್ಮಹತ್ಯೆ ಆಲೋಚನೆಗಳು ಬಂದ ಸಮಯದಲ್ಲಿ ಚಿಕಿತ್ಸೆ ಹಾಗೂ ಆಪ್ತ ಸಮಾಲೋಚನೆಯ ಸೇವೆ ಪಡೆಯಿರಿ. ಟೆಲಿ-ಮನಸ್ ಉಚಿತ ಸಹಾಯವಾಣಿ ಸಂಖ್ಯೆ 14416 ಇದರ ಸಹಾಯ ಪಡೆಯಲು ತಿಳಿಸಿದರು.

ಕೆ.ಎಲ್.ಇ. ಸಂಸ್ಥೆಯ ಜಗದ್ಗುರು ತೋಂಟದಾರ್ಯ ಪದವಿ ಮಹಾವಿದ್ಯಾಲಯದ ಪ್ರಾಂಶುಪಾಲ ಪ್ರೊ. ಪಿ.ಜಿ. ಪಾಟೀಲ ಪ್ರಾಸ್ತಾವಿಕವಾಗಿ ಮಾತನಾಡಿ, ಜೀವನ ಅತ್ಯಮೂಲ್ಯವಾದುದು. ಎಲ್ಲಾ ಸಮಸ್ಯೆಗಳಿಗೆ ಸಾವು ಒಂದೇ ಪರಿಹಾರವಲ್ಲ. ಬದುಕಿನಲ್ಲಿ ಈಜಬೇಕು, ಇದ್ದು ಜಯಿಸಬೇಕು. ದೇಹ ಮತ್ತು ಮನಸ್ಸನ್ನು ಸದೃಢಗೊಳಿಸಿಕೊಂಡು ಆತ್ಮಹತ್ಯೆಯಂತಹ ನಿರ್ಧಾರಗಳಿಂದ ದೂರವಿರಬೇಕೆಂದು ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಅತಿಥಿಗಳಾಗಿ ಆಗಮಿಸಿದ್ದ ಜಿಲ್ಲಾ ಕುಷ್ಠರೋಗ ನಿರ್ಮೂಲನಾಧಿಕಾರಿ

ಉಪನ್ಯಾಸಕರಾಗಿ ಆಗಮಿಸಿದ್ದ ತಾಲೂಕಾ ಆರೋಗ್ಯಾಧಿಕಾರಿ ಡಾ. ಪ್ರೀತ್ ಖೋನಾ ಮಾತನಾಡಿ, ಪ್ರತಿ 40 ಸೆಕೆಂಡಿಗೆ 1 ಆತ್ಮಹತ್ಯೆ ಪ್ರಕರಣದಿಂದ ಸಾವು ಉಂಟಾಗುತ್ತಿದ್ದು, ಇತ್ತೀಚಿನ ದಿನಗಳಲ್ಲಿ ವಿದ್ಯಾರ್ಥಿಗಳು ಹೆಚ್ಚಾಗಿ ಆತ್ಮಹತ್ಯೆಗೆ ಶರಣಾಗುತ್ತಿರುವುದು ಕಳವಳಕಾರಿಯಾಗಿದೆ. ಪ್ರತಿಯೊಬ್ಬ ವಿದ್ಯಾರ್ಥಿಯೂ ಎಂತಹುದೇ ಸಮಸ್ಯೆ ಬಂದರೂ ಆತ್ಮಹತ್ಯೆಯ ಆಲೋಚನೆ ಮಾಡುವುದಿಲ್ಲ ಎಂದು ಪ್ರತಿಜ್ಞೆಯನ್ನು ಸ್ವಿಕರಿಸಿ ಉತ್ತಮ ಜೀವನ ನಡೆಸಬೇಕೆಂದು ಕರೆ ನೀಡಿದರು.

ಡಾ. ರಾಜೇಂದ್ರ ಸಿ.ಬಸರೀಗಿಡದ ಮಾತನಾಡಿ, ಖಿನ್ನತೆಯಿಂದ ಆತ್ಮಹತ್ಯೆಗಳು ಹೆಚ್ಚಾಗುತ್ತಿದ್ದು, ಖಿನ್ನತೆಗೆ ಸೂಕ್ತ ಚಿಕಿತ್ಸೆ ಇದೆ. ಆರೋಗ್ಯ ಇಲಾಖೆಯ ಸಹಾಯ ಪಡೆಯಲು ಹಾಗೂ ಟೆಲಿ-ಮನಸ್ ಉಚಿತ ಸಹಾಯವಾಣಿ 14416ಗೆ ಕರೆಮಾಡಿ ಆಪ್ತ ಸಮಾಲೋಚನೆ ಪಡೆಯುವ ಮೂಲಕ ಪರಿಹಾರ ಕಂಡುಕೊಳ್ಳಲು ವಿದ್ಯಾರ್ಥಿಗಳಿಗೆ ತಿಳಿಸಿದರು.

ಸ್ಥಾನಿಕ ಆಡಳಿತ ಮಂಡಳಿ ನಿರ್ದೇಶಕ ಈಶಣ್ಣಾ ಮುನವಳ್ಳಿ ಮಾತನಾಡಿ, ವಿದ್ಯಾರ್ಥಿ ಜೀವನ ಬಂಗಾರದ ಜೀವನವಾಗಿದ್ದು, ಜೀವನದಲ್ಲಿ ಸಮಸ್ಯೆಗಳು ಬರುವುದು ಸಹಜ. ಪ್ರತಿಯೊಂದು ಸಮಸ್ಯೆಗೆ ಪರಿಹಾರ ಇದ್ದೇ ಇರುತ್ತದೆ. ವಿದ್ಯಾರ್ಥಿಗಳು ಆತ್ಮಹತ್ಯೆಯ ಆಲೋಚನೆ ಮಾಡಬೇಡಿ ಎಂದು ತಿಳಿಸಿದರು. ಮಹಾವಿದ್ಯಾಲಯದ ವಿದ್ಯಾರ್ಥಿನಿ ಮಂಗಳಾ ಬಡಿಗೇರ ಪ್ರಾರ್ಥಿಸಿದರು. ಉಪನ್ಯಾಕರಾದ ರಾಜೇಶ್ವರಿ ಪಾಟೀಲ್ ನಿರೂಪಿಸಿದರು. ವೈ.ಆರ್.ಸಿ ಕಾರ್ಯಕ್ರಮ ಅಧಿಕಾರಿ ಡಾ. ನಾಗರಾಜ ಒಬಯ್ಯ ವಂದಿಸಿದರು.

ಕಾರ್ಯಕ್ರಮದಲ್ಲಿ ಆರೋಗ್ಯ ಇಲಾಖೆಯ ರೂಪಸೇನ ಚವ್ಹಾಣ, ಪುಷ್ಪಾ ಪಾಟೀಲ್, ರಾಜೇಂದ್ರ ಗಡಾದ, ಆರೋಗ್ಯ ಇಲಾಖೆ ಸಿಬ್ಬಂದಿಗಳು ಮತ್ತು ಕೆ.ಎಲ್.ಇ. ಸಂಸ್ಥೆಯ ಜಗದ್ಗುರು ತೋಂಟದಾರ್ಯ ಮಹಾವಿದ್ಯಾಲಯದ ವಿದ್ಯಾರ್ಥಿಗಳು ಬೋಧಕ ಹಾಗೂ ಬೋಧಕೇತರ ಸಿಬ್ಬಂದಿಗಳು ಹಾಜರಿದ್ದರು.

# ಆದರ್ಶ ಗುಣಗಳನ್ನು ಮೈಗೂಡಿಸಿಕೊಳ್ಳಿ



**■ವಿಜಯಸಾಕ್ಷಿ ಸುದ್ದಿ, ರೋಣ**

ಇಲ್ಲಿನ ಹೊಳೆ ಆಲೂರ ಮಂಡಲದ ಮೆಣಸಗಿ ಗ್ರಾಮದಲ್ಲಿ ಭಾರತೀಯ ಜನತಾ ಪಕ್ಷದ ವತಿಯಿಂದ ಪ್ರದಾನಮಂತ್ರಿ ನರೇಂದ್ರ ಮೋದಿಯವರ ಜನ್ಮದಿನಾಚರಣೆ ದಿನದಿಂದ ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಜಯಂತಿಯವರೆಗೂ ಹಮ್ಮಿಕೊಂಡಿರುವ ಸೇವಾ ಪಾಕ್ಷಿಕ ಕಾರ್ಯಕ್ರಮದ ನಿಮಿತ್ತ ಮೆಣಸಗಿ ಗ್ರಾಮದ ಸರಕಾರಿ ಪ್ರಾಥಮಿಕ ಶಾಲೆ ಮೈದಾನದಲ್ಲಿ ಸಸಿ ನೆಡುವ ಕಾರ್ಯಕ್ರಮವನ್ನು ನರಗುಂದದ ಯುವ ನಾಯಕ ಉಮೇಶಗೌಡ ಸಿ. ಪಾಟೀಲ ನೆರವೇರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ದೇಶಪ್ರೇಮ ಎಲ್ಲರಲ್ಲಿಯೂ ಇರಬೇಕು. ನರೇಂದ್ರ ಮೋದಿಯವರಲ್ಲಿ ಇರುವ ದೇಶಪ್ರೇಮ, ಬಡವರ ಕಲ್ಯಾಣ, ಸಾಮಾಜಿಕ ಸೇವೆಯಂತಹ ಗುಣಗಳನ್ನು ನಾವೆಲ್ಲರೂ ಮೈಗೂಡಿಸಿಕೊಳ್ಳಬೇಕೆಂದರು.

ಹೊಳೆ ಆಲೂರ ಮಂಡಲ ಬಿಜೆಪಿ ಅಧ್ಯಕ್ಷ ಸೋಮು ಬಿ.ಚರೇದ, ಮುತ್ತಣ್ಣ ಜಂಗಣ್ಣವರ, ಅಶೋಕ ಹೆಬ್ಬಳ್ಳಿ, ಜಿ.ಪಂ ಮಾಜಿ ಸದಸ್ಯ ಶಿವುಕುಮಾರ ನೀಲಗುಂದ, ಬಿಜೆಪಿ ಮುಖಂಡರಾದ ಸೋಮನಗೌಡ ಹುದೇಡಮನಿ, ಸುರೇಶ ಗುರಮ್ಮನವರ, ಎಸ್‌ಡಿಎಂಸಿ ಅಧ್ಯಕ್ಷ ಹಿರೇಗೌಡ್ರ, ಪುಂಡಲೀಕ ಮಾದರ, ಚಂದ್ರು ಬದಾಮಿ, ಭೀಮನಗೌಡ ಹಿರೇಗೌಡರ ಸೇರಿದಂತೆ ಗ್ರಾಮಸ್ಥರು, ಶಾಲಾ ವಿದ್ಯಾರ್ಥಿಗಳು ಭಾಗವಹಿಸಿದ್ದರು. ಬಿಜೆಪಿ ಮುಖಂಡರಾದ ಕೇದಾರಗೌಡ ಮಣ್ಣೂರ ಸ್ವಾಗತಿಸಿ ಕಾರ್ಯಕ್ರಮ ನಿರೂಪಿಸಿದರು.

# ರೇವಣಸಿದ್ದೇಶ್ವರ ಕಾಟನ್ ಪ್ರೊಸೆಸಿಂಗ್ ಸೊಸೈಟಿಯ ರಜತ ಮಹೋತ್ಸವ ಇಂದು

**■ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ರೇವಣಸಿದ್ದೇಶ್ವರ ಕಾಟನ್ ಪ್ರೊಸೆಸಿಂಗ್ ಕೋ-ಆಪ್ ಸೊಸೈಟಿಯ ಕಾರ್ಯಾಲಯದಲ್ಲಿ ಸೆ. 20ರಂದು ಸಾಯಂಕಾಲ 4ಕ್ಕೆ ರೇವಣಸಿದ್ದೇಶ್ವರ ಸೊಸೈಟಿಯ ರಜತ ಮಹೋತ್ಸವ ಹಮ್ಮಿಕೊಳ್ಳಲಾಗಿದೆ ಎಂದು ಸೊಸೈಟಿ ಅಧ್ಯಕ್ಷ ರೇವಣಸಿದ್ದಪ್ಪ ಯಳಮಳಿ ಹೇಳಿದರು.

ನಗರದ ಪತ್ರಿಕಾಭವನದಲ್ಲಿ ಶುಕ್ರವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರೇವಣಸಿದ್ದೇಶ್ವರ ಕಾಟನ್ ಪ್ರೊಸೆಸಿಂಗ್ ಸೊಸೈಟಿಯು



2001ರಲ್ಲಿ ಪ್ರಾರಂಭವಾಗಿದ್ದು, ಪ್ರಸ್ತುತ 149 ಸದಸ್ಯರನ್ನು ಹೊಂದಿದೆ. ಅಲ್ಲದೇ 14,90,000 ರೂ.ಗಳ ಶೇರು ಬಂಡವಾಳ ಹೊಂದಿದೆ. ಪ್ರಸಕ್ತ ಸಾಲಿನಲ್ಲಿ 8 ಕೋಟಿ 99 ಲಕ್ಷ ಅಂದಾಜು ವಹಿವಾಟು ಮಾಡಿ 4,83,266 ರೂ ನಿವ್ವಳ ಲಾಭಗಳಿಸಿದೆ. ಕಳೆದ 25 ವರ್ಷದಿಂದ ಸಂಘವು ಪ್ರತಿವರ್ಷ ಡಿವ್ಹಿಡೆಂಡ್ ಕೊಡುತ್ತಾ ಬಂದಿದ್ದು, ರಜತ ಮಹೋತ್ಸವದ ಅಂಗವಾಗಿ ಪ್ರಸಕ್ತ ಸಾಲಿನಿಂದ ಶೇ.25ರಷ್ಟು ಡಿವ್ಹಿಡೆಂಡ್ ಕೊಡಲು ಆಡಳಿತ ಮಂಡಳಿ ನಿರ್ಧರಿಸಿದೆ. ಹೀಗಾಗಿ ಸೊಸೈಟಿಯ ಆಡಿಟ್ ವರ್ಗೀಕರಣ ಎ ಆಗಿದೆ ಎಂದರು.


ಮುಂಬರುವ ದಿನಗಳಲ್ಲಿ ರೇವಣಸಿದ್ದೇಶ್ವರ ಕಾಟನ್ ಪ್ರೊಸೆಸಿಂಗ್ ಕೋ-ಆಪ್ ಸೊಸೈಟಿ ಹಲವಾರು ಸಾಮಾಜಿಕ ಕೆಲಸವನ್ನು ಮಾಡಲಿದ್ದು, ಹಾಗೆ ಸೊಸೈಟಿಯಯನ್ನು ಬ್ಯಾಂಕ್ ಆಗಿ ಮಾಡಲು ಪ್ರಯತ್ನ ಮಾಡಲಾಗುತ್ತಿದೆ. ಹೆಚ್ಚಿನ ಪ್ರಮಾಣದಲ್ಲಿ ಶೇರು ಬಂಡವಾಳ ಹಾಕುವ ಪ್ರಯತ್ನ ಮಾಡಲಾಗುತ್ತಿದೆ. ಸೊಸೈಟಿಟಿಂದ ಜನಪರವಾದ ಕೆಲಸವನ್ನು ಮಾಡಲಾಗುತ್ತಿದೆ ಎಂದರು.

ಈ ವೇಳೆ ಸಂಘದ ಸದಸ್ಯ ಚನ್ನವೀರಪ್ಪ ದಿಂಡೂರು, ಚಂದ್ರು ಪತ್ತಾರ, ಉಮೇಶ ಹುಬ್ಬಳ್ಳಿ, ಈಶಣ್ಣ ಮುನವಳ್ಳಿ ಉಪಸ್ಥಿತರಿದ್ದರು.

# ಇಂದು ಎಚ್.ಎಂ.ರೇವಣ್ಣ ಗದಗ ಜಿಲ್ಲೆಗೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠನ ಪ್ರಾಧಿಕಾರದ ಅಧ್ಯಕ್ಷ ಎಚ್.ಎಂ.ರೇವಣ್ಣ ಅವರು ಸೆಪ್ಟೆಂಬರ್ 20 ರಂದು ಬೆಳಿಗ್ಗೆ 10 ಗಂಟೆಗೆ ಮುಖ್ಯಮಂತ್ರಿಯವರೊಂದಿಗೆ ಬೆಂಗಳೂರಿನಿಂದ ವಿಮಾನದ ಮೂಲಕ ಹೊರಟು ಬೆಳಿಗ್ಗೆ 11 ಗಂಟೆಗೆ ಹುಬ್ಬಳ್ಳಿ ವಿಮಾನ ನಿಲ್ದಾಣಕ್ಕೆ ಆಗಮಿಸುವರು. ಬೆಳಿಗ್ಗೆ 11.10 ಗಂಟೆಗೆ ಹುಬ್ಬಳ್ಳಿ ವಿಮಾನ ನಿಲ್ದಾಣದಿಂದ ಹೆಲಿಕಾಪ್ಟರ್ ಮೂಲಕ ಹೊರಟು ಬೆಳಿಗ್ಗೆ 11.25 ಗಂಟೆಗೆ ಗದಗ ಜಿಲ್ಲಾಧಿಕಾರಿಗಳ ಕಚೇರಿ ಆವರಣದ ಹೆಲಿಪ್ಯಾಡ್ ಗೆ ಆಗಮಿಸುವರು. ನಂತರ ಅಲ್ಲಿಂದ ಗದಗ ಮುಳಗುಂದ ರಸ್ತೆಯಲ್ಲಿನ ಕನಕ ಭವನ ಶ್ರೀ ರಾಕೇಶ ಸಿದ್ದರಾಮಯ್ಯ ಸಭಾಂಗಣದಲ್ಲಿ ಗದಗ ತಾಲೂಕು ಕುರುಬರ ಸಂಘ (ರಿ) ಗದಗ ವತಿಯಿಂದ ಆಯೋಜಿಸಿರುವ ತಾಲೂಕು ಸಂಘದ ರಜತ ಮಹೋತ್ಸವ ಸವಿನೆನಪಿಗಾಗಿ ಸ್ಮರಣ ಸಂಚಿಕೆ ಬಿಡುಗಡೆ ರಾಜ್ಯ ಮಟ್ಟದ ಕನಕೋತ್ಸವ



ಹಾಗೂ ಸಂಘ ಜೀವಿ ಫಕೀರಪ್ಪ ಹೆಬಸೂರ ಅವರ ಅಭಿನಂದನಾ ಗ್ರಂಥ ಸಮರ್ಪಣೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು. ಮಧ್ಯಾಹ್ನ 3.30 ಗಂಟೆಗೆ ಗದಗ ಜಿಲ್ಲಾಧಿಕಾರಿಗಳ ಕಚೇರಿ ಆವರಣದ ಹೆಲಿಪ್ಯಾಡ್‌ದಿಂದ ಹೆಲಿಕಾಪ್ಟರ್ ಮೂಲಕ ಹುಬ್ಬಳ್ಳಿ ವಿಮಾನ ನಿಲ್ದಾಣಕ್ಕೆ ಪ್ರಯಾಣಿಸಿ ಅಲ್ಲಿಂದ ಬೆಂಗಳೂರಿಗೆ ಹೊರಡುವರು ಎಂದು ಪ್ರಕಟಣೆ ತಿಳಿಸಿದೆ.

# ಸಿಎಂ ಸಿದ್ಧರಾಮಯ್ಯರಿಗೆ ಮನವಿ ಸಲ್ಲಿಸಲು ನಿರ್ಧಾರ

**■ವಿಜಯಸಾಕ್ಷಿ ಸುದ್ದಿ, ಗದಗ**

ಸೆ.21ರಂದು ಗದಗ ನಗರಕ್ಕೆ ಆಗಮಿಸಲಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಗದಗ ಜಿಲ್ಲೆಯಲ್ಲಿ ಡಿಸಿಸಿ ಬ್ಯಾಂಕ್ ಮತ್ತು ಗದಗ ಜಿಲ್ಲಾ ಹಾಲು ಒಕ್ಕೂಟ (ಕೆಎಂಎಫ್) ಸ್ಥಾಪನೆಗೆ ಆಗ್ರಹಿಸಿ ಕರ್ನಾಟಕ ರಕ್ಷಣಾ ವೇದಿಕೆ ಗದಗ ಜಿಲ್ಲಾ ಘಟಕದ ವತಿಯಿಂದ ಮನವಿ ಸಲ್ಲಿಸುವುದಾಗಿ ಕರವೇ ಗದಗ ಜಿಲ್ಲಾಧ್ಯಕ್ಷ ಹನಮಂತಪ್ಪ ಎಚ್. ಅಬ್ಬಿಗೇರಿ ತಿಳಿಸಿದ್ದಾರೆ.

ಗದಗ ಜಿಲ್ಲೆಯಾಗಿ ಸುಮಾರು 27 ವರ್ಷಗಳಿಂದ ಡಿಸಿಸಿ ಬ್ಯಾಂಕ್ ಗದಗ ಜಿಲ್ಲೆಯಲ್ಲಿ ಸ್ಥಾಪನೆಯಾಗಿಲ್ಲ. ಗದಗ ಜಿಲ್ಲೆಯ ಜನತೆ ಇಂದಿಗೂ ಧಾರವಾಡಕ್ಕೆ ಹೋಗುವ ಸ್ಥಿತಿ ಇದೆ. ಆದ್ದರಿಂದ, ಮುಖ್ಯಮಂತ್ರಿಗಳು



ಗದಗ ಜಿಲ್ಲೆಗೆ ನೂತನವಾಗಿ ಡಿಸಿಸಿ ಬ್ಯಾಂಕನ್ನು ಮಂಜೂರು ಮಾಡಬೇಕು ಹಾಗೂ ಗದಗ ಜಿಲ್ಲಾ ಹಾಲು ಒಕ್ಕೂಟವನ್ನು (ಕೆಎಂಎಫ್) ಪ್ರತ್ಯೇಕವಾಗಿ ಸ್ಥಾಪನೆ ಮಾಡಬೇಕೆಂದು ಮನವಿ ಸಲ್ಲಿಸಲಾಗುವುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ಯಾರಾ ಲೀಗಲ್ ವಾಲಂಟಿಯರ್ಸ್ ಆಯ್ಕೆಗಾಗಿ ಅರ್ಜಿ ಆಹ್ವಾನ

**■ವಿಜಯಸಾಕ್ಷಿ ಸುದ್ದಿ, ಗದಗ**

ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ನವದೆಹಲಿ ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಬೆಂಗಳೂರು ಇವರು ಅರೆಕಾಲಿಕ ಸ್ವಯಂಸೇವಕರುಗಳನ್ನು (ಪ್ಯಾರಾ ಲೀಗಲ್ ವಾಲಂಟಿಯರ್ಸ್) ಗದಗ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರಕ್ಕೆ ಹಾಗೂ ರೋಣ, ಲಕ್ಷ್ಮೇಶ್ವರ, ಮುಂಡರಗಿ ಹಾಗೂ ನರಗುಂದ ತಾಲೂಕಾ ಕಾನೂನು ಸೇವಾ ಸಮಿತಿಗಳಿಗೆ ಆಯ್ಕೆ ಮಾಡಲು ನಿರ್ದೇಶನ ನೀಡಿರುತ್ತಾರೆ.

ಸ್ವಪ್ರೇರಿತ ಕಾನೂನು ಸಹಾಯಕರು ಯಾವುದೇ ಶುಲ್ಕ, ಸಂಭಾವನೆ ಅಥವಾ ಸಂಬಳವನ್ನು ನಿರೀಕ್ಷಿಸದೆ ತಮ್ಮ ಸುತ್ತಲಿನ ಪ್ರದೇಶದಲ್ಲಿರುವ ಶೋಷಿತ ಹಾಗೂ ತುಳಿತಕ್ಕೊಳಗಾದ ಜನರ ಸೇವೆಗಳನ್ನು ಮಾಡಲು ಅರ್ಪಣಾ ಮನೋಭಾವದಿಂದ ಕಾರ್ಯನಿರ್ವಹಿಸಲು ಇಚ್ಛಿಸುವ ಕಾನೂನು ವಿದ್ಯಾರ್ಥಿಗಳು, ವೈದ್ಯಕೀಯ ಕ್ಷೇತ್ರದಲ್ಲಿ ಕೆಲಸ ಮಾಡುತ್ತಿರುವ ವ್ಯಕ್ತಿಗಳು, ಉನ್ನತ ಶಿಕ್ಷಣ ಪಡೆಯುತ್ತಿರುವ ವಿದ್ಯಾರ್ಥಿಗಳು, ಎಮ್.ಎಸ್.ಡಬ್ಲೂ ವಿದ್ಯಾರ್ಥಿಗಳು ಮತ್ತು ಶಿಕ್ಷಕರು, ಕಾನೂನು ವಿದ್ಯಾಲಯಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು, ಆಶಾ ಕಾರ್ಯಕರ್ತೆಯರು, ಅಂಗನವಾಡಿ ಕಾರ್ಯಕರ್ತೆಯರು, ನಿವೃತ್ತ ಸರ್ಕಾರಿ ನೌಕರರು, ಮಾಜಿ ಸೈನಿಕರು ಹಾಗೂ ಅವರ ಕುಟುಂಬದ ಸದಸ್ಯರು, ವಿವಿಧ ಸಂಘಟನೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಾಮಾಜಿಕ ಸೇವಾ ಮನೋಭಾವ ಹೊಂದಿರುವ ಪುರುಷ ಮತ್ತು ಮಹಿಳೆಯರು, ಮಂಗಳಮುಖಿಯರು, ಸನ್ನಡತೆ ಹೊಂದಿದ ಕಾರಾಗೃಹ ಬಂಧಿಗಳು ಮತ್ತು ಸ್ವ-ಸಹಾಯ ಸಂಘಗಳ ಸದಸ್ಯರು, ಸಾಮಾಜಿಕ ಕಾರ್ಯಕರ್ತರು ಅರ್ಜಿ ಸಲ್ಲಿಸಬಹುದು.

ಗದಗ ತಾಲೂಕಿನಲ್ಲಿ ಸೇವೆ ಸಲ್ಲಿಸಲು ಆಸಕ್ತ ಅಭ್ಯರ್ಥಿಗಳು ಗದಗ ಜಿಲ್ಲಾ ನ್ಯಾಯಾಲಯದ ಆವರಣದಲ್ಲಿರುವ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಗದಗ ಕಚೇರಿಗೆ ಹಾಗೂ ಆಯಾ ತಾಲೂಕಿನ ಅಭ್ಯರ್ಥಿಗಳು ಮೇಲ್ಕಂಡ ತಾಲೂಕಿನ ನ್ಯಾಯಾಲಯದ ಆವರಣದಲ್ಲಿರುವ ತಾಲೂಕಾ ಕಾನೂನು ಸೇವಾ ಸಮಿತಿಗಳಲ್ಲಿರುವ ನಿಗದಿತ ಅರ್ಜಿ ನಮೂನೆಯನ್ನು ಪಡೆದು ಭರ್ತಿ ಮಾಡಿದ ಅರ್ಜಿಗಳನ್ನು 30.09.2025ರ ಒಳಗಾಗಿ ಖುದ್ದಾಗಿ ಸಲ್ಲಿಸಬೇಕೆಂದು ಹಾಗೂ ಅಗತ್ಯಬಿದ್ದರೆ ಸಂದರ್ಶನದ ದಿನಾಂಕ ಹಾಗೂ ಸಮಯವನ್ನು ನಂತರ ತಿಳಿಸಲಾಗುವುದು ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡ್ರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಹಳೆಯ ವಿದ್ಯಾರ್ಥಿಗಳಿಂದ ಶಿಕ್ಷಕರ ದಿನಾಚರಣೆ, ಗುರುವೃಂದಕ್ಕೆ ಸನ್ಮಾನ**

# ವಿದ್ಯಾರ್ಥಿಗಳಲ್ಲಿ ಮಾನವೀಯ ಮೌಲ್ಯಗಳನ್ನು ತುಂಬಿ



ಶಿಕ್ಷಕಿ ಕವಿತಾ ಪಾತ್ರೂಟ್ ಮಾತನಾಡಿ, ಶಿಕ್ಷಕರ ವೃತ್ತಿ ಸಾಮಾನ್ಯ ವೃತ್ತಿಯಲ್ಲ. ಶಿಕ್ಷಕರ ದಿನಾಚರಣೆಯನ್ನು ಹಳೆ ವಿದ್ಯಾರ್ಥಿಗಳು ವಿಶಿಷ್ಟವಾಗಿ ಅರ್ಥಪೂರ್ಣವಾಗಿ ಆಚರಿಸಿದ್ದೀರಿ. ಮಕ್ಕಳಲ್ಲಿ ಸಂಸ್ಕಾರವನ್ನು ಬೆಳೆಸಬೇಕು. ಹಿರಿಯರಿಗೆ ಗೌರವ ಕೊಡುವುದರ ಕುರಿತು ಪಾಲಕರು ಮಕ್ಕಳಿಗೆ ತಿಳಿ ಹೇಳಬೇಕಾಗಿದೆ ಎಂದು ಹೇಳಿದರು.

**■ವಿಜಯಸಾಕ್ಷಿ ಸುದ್ದಿ, ಡಂಬಳ**

ಶಾಲೆಗಳಲ್ಲಿ ಅಕ್ಷರದ ಜತೆಗೆ ವಿದ್ಯಾರ್ಥಿಗಳಿಗೆ ನೈತಿಕ ಶಿಕ್ಷಣ ಮತ್ತು ಮಾನವೀಯ ಮೌಲ್ಯಗಳನ್ನು ತುಂಬುವ ಹೊಣೆಯನ್ನು ಶಿಕ್ಷಕರು ಪಾಲಿಸಬೇಕಿದೆ ಎಂದು ಮುಂಡರಗಿ ತಾಲೂಕಾ ಕ್ಷೇತ್ರ ಶಿಕ್ಷಣಾಧಿಕಾರಿ ಗಂಗಾಧರ ಅಣ್ಣಿಗೇರಿ ಹೇಳಿದರು.

ಹೊಸೂರು ಡಂಬಳ ಗ್ರಾಮದ ಸರಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಹಳೆಯ ವಿದ್ಯಾರ್ಥಿಗಳಿಂದ ಶಿಕ್ಷಕರ ದಿನಾಚರಣೆ ಮತ್ತು ಗುರುವೃಂದಕ್ಕೆ ಸನ್ಮಾನ ಕಾರ್ಯಕ್ರಮದ ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಅವರು ಮಾತನಾಡಿದರು.

ಸಿ.ಆರ್.ಪಿ ಮೃತ್ಯುಂಜಯ ಪೂಜಾರ, ಮುಖ್ಯೋಪಾಧ್ಯಾಯ ಹೇಮಣ್ಣ ಬೇವಿನಕಟ್ಟಿ ಮಾತನಾಡಿ, ಮಕ್ಕಳಿಗೆ ಅಕ್ಷರ ಕಲಿಸಿಕೊಟ್ಟರೆ ಸಾಲದು, ಅದರೊಂದಿಗೆ ಬದುಕಿಗೆ ಬೇಕಾದ ಮೌಲ್ಯಗಳನ್ನು ಹಾಗೂ ವ್ಯಾವಹಾರಿಕ ಜ್ಞಾನವನ್ನು ನೀಡುವುದು ಒಬ್ಬ ಶಿಕ್ಷಕ ಮಾಡಬೇಕಾದ ಕಾರ್ಯವಾಗಿದೆ ಎಂದು ಹೇಳಿದರು.

ಶ್ರೀ ಮಾರುತೇಶ್ವರ ಕ್ರೀಡಾ ಮತ್ತು ಸಾಂಸ್ಕೃತಿಕ ಯುವ ಸ್ನೇಹ ಬಳಗದ ಅಧ್ಯಕ್ಷ ಶಾಂತವೀರ ಓಲಿ, ಲೋಕೇಶ ದಾಸರ ಮಾತನಾಡಿ, ವಿದ್ಯಾರ್ಥಿಗಳನ್ನು ಜವಾಬ್ದಾರಿಯುತ ಪ್ರಜೆಗಳಾಗಿ ರೂಪಿಸುವ ಶಿಕ್ಷಕರ ಶ್ರಮಕ್ಕೆ ಯಾವ ಪುರಸ್ಕಾರವೂ ಸಾಟಿಯಾಗುವುದಿಲ್ಲ. ಗುರು ಎಂದರೆ ವ್ಯಕ್ತಿಯಷ್ಟೇ ಅಲ್ಲ, ಸುಜ್ಞಾನದೆಡೆಗೆ ಕರೆದೊಯ್ಯುವ ಶಕ್ತಿ ಎಂದು ಹೇಳಿದರು.

ಮುಂಡರಗಿ ತಾಲೂಕಾ ಕ್ಷೇತ್ರ ಶಿಕ್ಷಾಧಿಕಾರಿ ಗಂಗಾಧರ ಅಣ್ಣಿಗೇರಿ, ಸಿ.ಆರ್.ಪಿ ಮೃತ್ಯುಂಜಯ ಪೂಜಾರ, ಶಾಲೆಯ ಮುಖ್ಯೋಪಾಧ್ಯಾಯ ಹೇಮಣ್ಣ ಬೇವಿನಕಟ್ಟಿ, ಹಿರಿಯ ಶಿಕ್ಷಕಿ ಕಸ್ತೂರಿಬಾಯಿ ಕಲಾಲ, ಸಹ ಶಿಕ್ಷಕಿ ಕವಿತಾ ಪಾತ್ರೋಟ, ಗಿರೀಶ್ ವಾಲ್ಮೀಕಿ ಮತ್ತು ಸತತ 19 ವರ್ಷಗಳಿಂದ ಮಧ್ಯಾಹ್ನದ ಬಿಸಿಯೂಟ ತಯಾರು ಮಾಡಿ ವಿದ್ಯಾರ್ಥಿಗಳಿಗೆ ಉಣಬಡಿಸುತ್ತಿರುವ ಶಕುಂತಲಾ ಕರವೀರಮಠ ಮತ್ತು ಈರಮ್ಮ ತಳವಾರ ಅವರನ್ನು ಸನ್ಮಾನಿಸಲಾಯಿತು.

ಎಸ್‌ಡಿಎಂಸಿ ಉಪಾಧ್ಯಕ್ಷೆ ನಿರ್ಮಲ ಭಜಂತ್ರಿ, ಶರಣಪ್ಪ ಮೂಕಬಸಪ್ಪನವರ, ಹಳೆ ವಿದ್ಯಾರ್ಥಿಗಳಾದ ಮಲ್ಲಿಕಾರ್ಜುನ ಓಲಿ, ಮುದುಕಪ್ಪ ಕರ್ಣಿ, ವೀರಯ್ಯ ಕರವೀರಮಠ, ಗಿರೀಶ ದಾಸರ, ಮಾಬುಸಾಬ್ ಹಳ್ಳಿಕೇರಿ, ಅಸ್ಪಾಕ ಕಾಸ್ತರ, ಸದ್ದಾಂ ಕರ್ನಾಚಿ, ಸಂತೋಷ ಬಾರಕೇರ, ಪ್ರಶಾಂತ್ ಓಲಿ ಸೇರಿದಂತೆ ವಿದ್ಯಾರ್ಥಿಗಳು ಇದ್ದರು.

# ಗಮನ ಸೆಳೆದ ಬಿತ್ತುವ ಕಾರ್ಯಕ್ರಮ

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಸಮೀಪದ ಜಕ್ಕಲಿ ಗ್ರಾಮದ ಹಾಲಕೆರೆ ಶ್ರೀ ಅನ್ನದಾನೇಶ್ವರ ಶಾಖಾ ಶ್ರೀಮಠದಲ್ಲಿ ನಡೆಯುತ್ತಿರುವ ನಾಲವತವಾಡ ಶ್ರೀ ವೀರೇಶ್ವರ ಶರಣರ ಪುರಾಣದಲ್ಲಿ ಬರುವ ಬಿತ್ತುವ ಸನ್ನಿವೇಶ ಬುಧವಾರ ವಿಜೃಂಭಣೆಯಿಂದ ನಡೆಯಿತು.

ಸ್ಥಳೀಯ ಶ್ರೀ ಬಸವೇಶ್ವರ ಭಜನಾ ಮೇಳದವರು ಎತ್ತುಗಳನ್ನು ವಿಶೇಷ ಅಲಂಕಾರದೊಂದಿಗೆ ಹೂಡಿಕೊಂಡು ಪೂಜೆ ನೆರವೇರಿಸಿ ಗ್ರಾಮದ ಪ್ರಮುಖ ಬೀದಿಗಳ ಮೂಲಕ ವೈಭವದ ಮೆರವಣಿಗೆಯೊಂದಿಗೆ ಶ್ರೀಗಳವರ ಮಠವನ್ನು ತಲುಪಿದರು. ಬಳಿಕ ಶ್ರೀಮಠದಲ್ಲಿ ಬಿತ್ತುವ ಈ ಸನ್ನಿವೇಶವನ್ನು ನೈಜವಾಗಿ ಆಚರಿಸುವ ಮೂಲಕ ರೈತ ಸಮೂಹ ಗಮನ ಸೆಳೆದರು.

ಹಿಂದಿನ ರಾತ್ರಿ ಕೃಷಿ ಕೆಲಸಕ್ಕೆ ಬಳಸುವ ಸಲಕರಣೆಗಳಾದ ಕೂರಿಗೆಯನ್ನು ವೀರಪ್ಪ ಯಾವಗಲ್ಲ,



ಬೆಳಸಲ ಕುಂಟಿಯನ್ನು ಮುತ್ತಪ್ಪ ಕೋರಿ ಹರಾಜು ಮಾಡುವ ವೇಳೆ ತಗೆದುಕೊಂಡಿದ್ದರು. ಮಾರನೇ ದಿನ ಮಹಾಂತೇಶ ಮೆಣಸಗಿ ಇವರ ಎತ್ತುಗಳೊಂದಿಗೆ ವೀರಪ್ಪ ಯಾವಗಲ್ಲ ಬಿತ್ತನೆ ಮಾಡಿದರು. ಶಕುಂತಲಾ ಯಾವಗಲ್ಲ ಅಕ್ಕಡಿ ಹಾಕಿದರು. ಮುತ್ತಪ್ಪ ಕೋರಿ ಬೆಳೆಸಲ್ಲ ಹೊಡೆದು ಧನ್ಯತೆ ಮೆರೆದರು.

ಈ ಸಂದರ್ಭದಲ್ಲಿ ಎಂ.ಜಿ. ಗುರುಸಿದ್ದೇಶ್ವರ ಶಾಸ್ತ್ರೀಗಳು, ರೈತರಾದ ಶರಣಯ್ಯ ಹಿರೇಮಠ, ಶೇಖಣ್ಣ ಮೇಟಿ, ವೀರಣ್ಣ ಸಂಗಳದ, ಮಲ್ಲಣ್ಣ ಮೇಟಿ, ಗಣೇಶ ಯಾವಗಲ್ಲ, ಸುನೀಲ ಸಂಕನೂರ, ಶೇಖರ ಯಾವಗಲ್ಲ, ಕುಮಾರ ನರೇಗಲ್ಲ, ಮುತ್ತಪ್ಪ ಶ್ಯಾಶೆಟ್ಟಿ, ನಿಡಗುಂದಿಯ ಪರಸಪ್ಪ ತಳವಾರ, ಜಿಗಳೂರಿನ ಬಸವರಾಜ ಹಾಳಕೆರೆ, ತೆ-ೂಟಗಂಟಿಯ ಅಣ್ಣಪ್ಪ ಕುರಡಗಿ, ನರೇಗಲ್ಲದ ಮಲ್ಲಪ್ಪ ಮಾವಿನಕಾಯಿ, ಕೋಟುಮಚಗಿಯ ಮುತ್ತಣ್ಣ ನೇಗಲಿ ಸುತ್ತಮುತ್ತಲಿನ ರೈತರು ಸೇರಿದಂತೆ ಸದ್ಭಕ್ತರು ಭಾಗವಹಿಸಿದ್ದರು.


# ಜಿಪಿಎಲ್ ಟ್ಯಾಲೆಂಟ್ ಹಂಟ್ ಸೆ.21ಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಪ್ರೀಮಿಯರ್ ಲೀಗ್ (ಜಿಪಿಎಲ್) ಸೀಸನ್-3 ಈಗ ಟ್ಯಾಲೆಂಟ್ ಹಂಟ್ ಕಾರ್ಯಕ್ರಮದೊಂದಿಗೆ ಆರಂಭಗೊಳ್ಳಲು ಸಜ್ಜಾಗಿದ್ದು, ಇದು ಗದಗ ಜಿಲ್ಲೆಯ ಕ್ರಿಕೆಟಿಗರಿಗೆ ತಮ್ಮ ಸಾಮರ್ಥ್ಯವನ್ನು ಪ್ರದರ್ಶಿಸಲು ಸುವರ್ಣಾವಕಾಶವನ್ನು ಒದಗಿಸುತ್ತದೆ.

ಟ್ಯಾಲೆಂಟ್ ಹಂಟ್ ಕಾರ್ಯಕ್ರಮವು ಸೆ. 21ರಂದು ಬೆಳಿಗ್ಗೆ 9 ಗಂಟೆಗೆ ನಗರದ ಶ್ರೀ ಕೆ.ಎಚ್. ಪಾಟೀಲ ಕ್ರಿಕೆಟ್ ನೆಟ್ ಪ್ರಾಕ್ಟೀಸ್ ಮೈದಾನ, ಟಿಪ್ಪು ಸುಲ್ತಾನ ಸರ್ಕಲ್, ಗದಗ ಇಲ್ಲಿ ನಡೆಯಲಿದೆ. ಗದಗ ಜಿಲ್ಲೆಯ ಎಲ್ಲೆಡೆಯಿಂದ ಕ್ರಿಕೆಟಿಗರು ಭಾಗವಹಿಸಿ ವೈಟ್ ಲೆದರ್ ಬಾಲ್ ಫಾರ್ಮಟ್‌ನಲ್ಲಿ ತಮ್ಮ ಕೌಶಲ್ಯವನ್ನು ಪ್ರದರ್ಶಿಸಲು ಆಹ್ವಾನಿಸಲಾಗಿದೆ.

ಟ್ಯಾಲೆಂಟ್ ಹಂಟ್ ನಂತರ ಗ್ರ್ಯಾಂಡ್ ಪ್ಲೇಯರ್ ಆಕ್ಷನ್ ಆಯೋಜಿಸಲಾಗುವುದು. ಇದರಲ್ಲಿ ಗದಗ ಪ್ರೀಮಿಯರ್




ಲೀಗ್ ಸೀಸನ್-3 ಫ್ರಾಂಚೈಸಿಗಳ ತಂಡದ ಮಾಲೀಕರು ಮತ್ತು ಆಯ್ಕೆ ಸಮಿತಿಯವರು ನೋಂದಾಯಿತ ಆಟಗಾರರನ್ನು ತಮ್ಮ ತಂಡಗಳಿಗೆ ಆಯ್ಕೆ ಮಾಡಿಕೊಳ್ಳುವರು. ಇದರ ಮೂಲಕ ಪ್ರತಿಯೊಬ್ಬ ಅರ್ಹ ಆಟಗಾರನಿಗೂ ಜಿಪಿಎಲ್ ತಂಡದಲ್ಲಿ ಆಡಲು ಅವಕಾಶ ದೊರಕುತ್ತದೆ.

ಈ ಕಾರ್ಯಕ್ರಮದ ವಿಶೇಷ ಆಕರ್ಷಣೆಯಾಗಿ ಶಾರ್ಕ್ ಟ್ಯಾಂಕ್‌ನಲ್ಲಿ ಪ್ರದರ್ಶಿಸಲ್ಪಟ್ಟ ಫ್ರೀಬೌಲರ್ ಬೌಲಿಂಗ್ ಯಂತ್ರವನ್ನು ಆಟಗಾರರು ನೇರವಾಗಿ ವೀಕ್ಷಿಸಿ ಅನುಭವಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

### ಪಿಎಲ್‌ಡಿ ಬ್ಯಾಂಕ್ ಅಭಿವೃದ್ಧಿಗೆ ಸದಾ ಬದ್ಧ: ಶಾಸಕ ಜಿ.ಎಸ್. ಪಾಟೀಲ

# ಕೆರೆಗಳ ಭರ್ತಿಗೆ ಅಗತ್ಯ ಕ್ರಮ

■ವಿಜಯಸಾಕ್ಷಿ ಸುದ್ದಿ, ರೋಣ

ರೋಣ ಹಾಗೂ ಗಜೇಂದ್ರಗಡ ತಾಲೂಕಿನಲ್ಲಿ ಕುಡಿಯುವ ನೀರಿನ ಸಮಸ್ಯೆ ನಿವಾರಣೆಗೆ ಸರಕಾರ 24.58 ಕೋಟಿ ರೂಗಳ ಅನುದಾನಕ್ಕೆ ಮಂಜೂರಾತಿ ನೀಡಿದ್ದು, ಅತಿ ಶೀಘ್ರದಲ್ಲಿ ಮಲಪ್ರಭಾ ಮತ್ತು ಕೃಷ್ಣಾ ಬಿ ಸ್ಕೀಂ ಮೂಲಕ ಎರಡೂ ತಾಲೂಕಿನಲ್ಲಿರುವ ಕೆರೆಗಳನ್ನು ಭರ್ತಿಗೊಳಿಸುವ ಮೂಲಕ ಕುಡಿಯುವ ನೀರಿನ ಸಮಸ್ಯೆಯನ್ನು ಬಗೆಹರಿಸಲಾಗುವುದು ಎಂದು ರಾಜ್ಯ ಖನಿಜ ನಿಗಮದ ಅಧ್ಯಕ್ಷರು, ಶಾಸಕರಾದ ಜಿ.ಎಸ್. ಪಾಟೀಲ ಹೇಳಿದರು.

ಅವರು ಶುಕ್ರವಾರ ತಾಲೂಕಾ ಸಹಕಾರಿ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕಿನ 24-25ನೇ ಸಾಲಿನ ವಾರ್ಷಿಕ ಮಹಾಸಭೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ರೋಣ ತಾಲೂಕಿನ 9 ಕೆರಗಳಿಗೆ ಮಲಪ್ರಭಾ ನದಿಯ




ನೀರು ತುಂಬಿಸುವ ಕಾರ್ಯಕ್ಕೆ 43.50 ಕೋಟಿ ಮತ್ತು ರೋಣ ವಿಭಾಗಕ್ಕೆ ಬರುವ ಮಲಪ್ರಭಾ ಬಲದಂಡೆ ಇಟಗಿ ಕಾಲುವೆಗಳ ಆಧುನೀಕರಣ, ಕಾಲುವೆ ನಿರ್ಮಾಣ ಮಾಡಲು 31.8 ಕೋಟಿ ಸೇರಿ ಒಟ್ಟು 74.58 ಕೋಟಿ ರೂಗಳನ್ನು ರಾಜ್ಯ ಸರಕಾರ ಬಿಡುಗಡೆಗೊಳಿಸಿದೆ ಎಂದರು.

ಗಜೇಂದ್ರಗಡ ತಾಲೂಕಿನಲ್ಲಿರುವ ಕೆರೆಗಳನ್ನು ಕೃಷ್ಣಾ ಬಿ ಸ್ಕೀಂ ಮೂಲಕ ಭರ್ತಿ ಮಾಡಲು ಅಗತ್ಯ ಕ್ರಮಗಳನ್ನು ತೆಗೆದುಕೊಂಡಿದ್ದು, ಈಗಾಗಲೇ 115 ಕೋಟಿ ರೂಗಳನ್ನು ಬಿಡುಗಡೆ ಮಾಡುವಂತೆ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಗಿದೆ. ಇದಕ್ಕೂ ಸಹ ಸಿದ್ದರಾಮಯ್ಯನವರು ಸಕಾರಾತ್ಮಕ ಸ್ಪಂದನೆ ನೀಡಿದ್ದು, ಶೀಘ್ರವೇ ಅನುದಾನ ಬಿಡುಗಡೆ ಮಾಡಲಾಗುವುದು ಎಂದು ತಿಳಿಸಿದ್ದಾರೆ. ಆದ್ದರಿಂದ, ಗಜೇಂದ್ರಗಡ ತಾಲೂಕಿನಲ್ಲಿನ ಕೆರೆಗಳನ್ನು ಭರ್ತಿ ಮಾಡುವ ಕಾರ್ಯಕ್ಕೆ ಶೀಘ್ರವೇ ಚಾಲನೆ ಸಿಗಲಿದೆ ಎಂದರು.

ರೋಣ ಮತ್ತು ಗಜೇಂದ್ರಗಡ ಸೇರಿದಂತೆ ಜಿಲ್ಲೆಯಲ್ಲಿ ಈ ಬಾರಿ ಮುಂಗಾರು ಮಳೆ ನಿರೀಕ್ಷೆಗೂ ಮೀರಿ ಸುರಿದ ಹಿನ್ನೆಲೆಯಲ್ಲಿ ರೈತರು ಸಂಕಷ್ಟ ಅನುಭವಿಸಿದ್ದಾರೆ. ಮುಂಗಾರು ಹಂಗಾಮಿನ ಬೆಳೆಗಳನ್ನು ಕಳೆದುಕೊಂಡು ನಷ್ಟ ಅನುಭವಿಸಿದ್ದಾರೆ. ಅವರ ನೆರವಿಗೆ ಧಾವಿಸಬೇಕಿರುವುದು ನಮ್ಮ ಹಾಗೂ ಅಧಿಕಾರಿಗಳ ಕರ್ತವ್ಯವಾಗಿದೆ. ಈ ದಿಶೆಯಲ್ಲಿ ಈಗಾಗಲೇ ಬೆಳೆ ಹಾನಿ ಸಮೀಕ್ಷಾ ತಂಡ ಎರಡೂ ತಾಲೂಕುಗಳಲ್ಲಿ

ರೈತರು ಸಹಕಾರಿ ಕ್ಷೇತ್ರಗಳಿಂದ ಪಡೆದ ಸಾಲವನ್ನು ಸಕಾಲಕ್ಕೆ ಪಾವತಿಸಬೇಕು. ಅಂದಾಗ ಸಹಕಾರಿ ಸಂಘಗಳು ಪ್ರಗತಿಯತ್ತ ಸಾಗಲು ಸಾಧ್ಯವಾಗುತ್ತದೆ. ಸಹಕಾರಿ ಸಂಘಗಳು ರೈತರ ಹಿತವನ್ನು ಬಯಸುವ ಸಂಸ್ಥೆಗಳಾಗಿದ್ದು, ರೈತರ ಆರ್ಥಿಕ ಬಲವರ್ಧನೆಯಲ್ಲಿ ಪ್ರಮುಖ ಪಾತ್ರವನ್ನು ವಹಿಸಿವೆ. ರೋಣ ತಾಲೂಕಿನ ಪಿಎಲ್‌ಡಿ ಬ್ಯಾಂಕ್ ಇದಕ್ಕೆ ಸಾಕ್ಷಿಯಾಗಿದ್ದು, ಸಹಕಾರಿ ಸಂಘಗಳ ಬೆಳವಣಿಗೆಗೆ ಬೇಕಾದ ಎಲ್ಲ ರೀತಿಯ ಸಹಕಾರವನ್ನು ನಾನು ನೀಡುತ್ತೇನೆ. ರೈತರು ಸಹ ಯೋಜನೆಗಳ ಲಾಭವನ್ನು ಪಡೆದುಕೊಳ್ಳುವ ಮೂಲಕ ಸಹಕಾರಿ ಕ್ಷೇತ್ರದ ಪ್ರಗತಿಗೆ ತಮ್ಮ ಕೊಡುಗೆಯನ್ನು ನೀಡಬೇಕು ಎಂದು ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ಬೆಳೆ ಹಾನಿ ಸಮೀಕ್ಷೆ ನಡೆಸಿ, ವರದಿ ಸರಕಾರಕ್ಕೆ ತಲುಪಿದೆ. ಅತಿ ಶೀಘ್ರದಲ್ಲಿ ಪರಿಹಾರದ ಹಣ ರೈತರ ಖಾತೆಗೆ ಜಮಾ ಆಗಲಿದೆ ಎಂದರು.

ರಮೇಶ ಪಲ್ಲೇದ ಅಧ್ಯಕ್ಷತೆ ವಹಿಸಿದ್ದರು. ಗ್ಯಾರಂಟಿ ಸಮಿತಿ ಅಧ್ಯಕ್ಷ ಸಂಗನಗೌಡ ಪಾಟೀಲ, ಉಪಾಧ್ಯಕ್ಷ ಯಚ್ಚರಗೌಡ ಗೋವಿಂದಗೌಡ್ರ, ಬಸವರಾಜ ನವಲಗುಂದ, ವಿ.ಆರ್. ಗುಡಿಸಾಗರ, ವಿ.ಬಿ. ಸೋಮನಕಟ್ಟಿಮಠ, ವೀರಣ್ಣ ಶೆಟ್ಟರ, ಪರಶುರಾಮ ಅಳಗವಾಡಿ, ಯೂಸುಫ್ ಇಟಗಿ, ಸಂಗಪ್ಪ ಮೆಣಸಿನಕಾಯಿ, ಅಂದಪ್ಪ ಬಿಚ್ಚೂರ, ರೂಪಾ ಅಂಗಡಿ, ಮಂಜುಳಾ ಹುಲ್ಲಣ್ಣವರ, ಮೋಹನ್ ಹುಲ್ಲಣ್ಣವರ, ಬಸವರಾಜ ಕರಿಗೌಡ್ರ, ಬಸನಗೌಡ ಪೊಲೀಸ್‌ಪಾಟೀಲ ಸೇರಿದಂತೆ ನಿರ್ದೇಶಕರು ಹಾಗೂ ಅಧಿಕಾರಿಗಳು ಉಪಸ್ಥಿತರಿದ್ದರು.

### ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿ ವತಿಯಿಂದ ಸಹಿ ಸಂಗ್ರಹಣಾ ಅಭಿಯಾನಕ್ಕೆ ನಾಳೆ ಚಾಲನೆ

# 'ದೇಶವ್ಯಾಪಿ ಮತಕಳ್ಳತನ ನಿಲ್ಲಿಸಿ'

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ದಿ. ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿರುವ ಗದಗ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಜಿಲ್ಲಾ ಕಾಂಗ್ರೆಸ್ ಸಮಿತಿ ವತಿಯಿಂದ 'ದೇಶವ್ಯಾಪಿ ಮತಕಳ್ಳತನ ನಿಲ್ಲಿಸಿ' ಸಹಿ ಸಂಗ್ರಹಣಾ ಅಭಿಯಾನಕ್ಕೆ ಸೆ. 21ರಂದು ಬೆಳಿಗ್ಗೆ 11ಕ್ಕೆ ಚಾಲನೆ ದೊರೆಯಲಿದೆ.

ಕಾಂಗ್ರೆಸ್ ಪಕ್ಷದ ಮಾಜಿ ಹಾಗೂ ಹಾಲಿ ಶಾಸಕರು, ಪಕ್ಷದ ಜಿಲ್ಲಾ ಪದಾಧಿಕಾರಿಗಳು, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು, ಜಿಲ್ಲಾ ಪಂಚಾಯಿತಿ, ತಾಲೂಕು ಪಂಚಾಯಿತಿ, ಗ್ರಾಮ ಪಂಚಾಯಿತಿ, ಎಪಿಎಂಸಿ ಪಕ್ಷದ ಅಧ್ಯಕ್ಷರು ಹಾಗೂ



ಸದಸ್ಯರು, ನಗರಸಭೆ, ಪಟ್ಟಣ ಪಂಚಾಯಿತಿ, ಪುರಸಭೆ ಅಧ್ಯಕ್ಷರು ಹಾಗೂ ಸದಸ್ಯರು, ಮಹಿಳಾ ಕಾಂಗ್ರೆಸ್, ಯುವ ಕಾಂಗ್ರೆಸ್, ಎಸ್‌ಸಿ/ಎಸ್‌ಟಿ, ಅಲ್ಪಸಂಖ್ಯಾತರ, ವಿದ್ಯಾರ್ಥಿ ಕಾಂಗ್ರೆಸ್, ಕಾಂಗ್ರೆಸ್ ಸೇವಾದಳ, ಹಿಂದುಳಿದ ವರ್ಗ, ಸಾಮಾಜಿಕ ಜಾಲತಾಣ, ರಾಜೀವಗಾಂಧಿ ಪಂಚಾಯತ ಸಂಘಟನೆ, ಮಾಜಿ ಸೈನಿಕರ ವಿಭಾಗ, ಮೀನುಗಾರ ವಿಭಾಗ, ಕಾರ್ಮಿಕರ ವಿಭಾಗ, ಐಎನ್‌ಟಿಯುಸಿ, ಕಾನೂನು ಮತ್ತು ಮಾನವ ಹಕ್ಕು ವಿಭಾಗ, ಕಿಸಾನ್ ಮತ್ತು ಖೇತ್ ಮಜದೂರ ವಿಭಾಗ, ಮಾಜಿ ಸೈನಿಕರ ವಿಭಾಗ, ವೈದ್ಯರ ವಿಭಾಗ, ವೃತ್ತಿಪರ ವಿಭಾಗ, ಪದವಿಧರ ಹಾಗೂ ಶಿಕ್ಷಕರ ವಿಭಾಗ, ನೀತಿ ಮತ್ತು ಸಂಶೋಧನೆ ತರಬೇತಿ ವಿಭಾಗ, ವಿಕಲಚೇತನರ ವಿಭಾಗ, ಲಿಗಲ್ ರೀಫಾರ್ಮ್ಸ್ ವಿಭಾಗ, ಐಟಿ ಮತ್ತು ಡಾಟಾ ವಿಭಾಗ ಮಾಧ್ಯಮ ಮತ್ತು ಸಂಪರ್ಕ ಇಲಾಖೆ ವಿಭಾಗಗಳ ಅಧ್ಯಕ್ಷರು ಹಾಗೂ ಸದಸ್ಯರು, ಪಕ್ಷದ ಅಭಿಮಾನಿಗಳು ಪಾಲ್ಗೊಳ್ಳಬೇಕೆಂದು ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿ ಪ್ರಧಾನ ಕಾರ್ಯದರ್ಶಿ ವಿ.ಬಿ. ಸೋಮನಕಟ್ಟಿಮಠ, ಗದಗ-ಬೆಟಗೇರಿ ಶಹರ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಬಿ.ಬಿ. ಅಸೂಟಿ, ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಕೃಷ್ಣಗೌಡ ಎಚ್.ಪಾಟೀಲ ಹಾಗೂ ಗದಗ ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ ವಿನಂತಿಸಿದ್ದಾರೆ.

ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷರು, ಕರ್ನಾಟಕ ಖನಿಜ ಅಬಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕ ಜಿ.ಎಸ್. ಪಾಟೀಲ ಅಧ್ಯಕ್ಷತೆ ವಹಿಸುವರು. ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ ಸಹಿ ಸಂಗ್ರಹಣಾ ಅಭಿಯಾನಕ್ಕೆ ಚಾಲನೆ ನೀಡುವರು. ಮಾಜಿ ಶಾಸಕರಾದ ಡಿ.ಆರ್. ಪಾಟೀಲ, ಬಿ.ಆರ್. ಯಾವಗಲ್, ಜಿ.ಎಸ್. ಗಡ್ಡದೇವರಮಠ, ರಾಮಕೃಷ್ಣ ದೊಡ್ಡಮನಿ, ರಾಮಣ್ಣ ಲಮಾಣಿ, ಮುಖಂಡರಾದ ಆನಂದಸ್ವಾಮಿ ಗಡ್ಡದೇವರಮಠ, ಸುಜಾತಾ ದೊಡ್ಡಮನಿ ಪಾಲ್ಗೊಳ್ಳುವರು.

# ಜಿಲ್ಲಾ ಉಸ್ತುವಾರಿ ಸಚಿವ ಎಚ್ ಕೆ ಪಾಟೀಲ ಜಿಲ್ಲಾ ಪ್ರವಾಸ

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಮತ್ತು ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಅವರು ಸೆಪ್ಟೆಂಬರ್ 20 ಹಾಗೂ 21 ರಂದು ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದು, ವಿವರ ಇಂತಿದೆ.

ಸೆಪ್ಟೆಂಬರ್ 20 ರಂದು ಬೆಳಿಗ್ಗೆ 10 ಗಂಟೆಗೆ ಮುಖ್ಯಮಂತ್ರಿಯವರೊಂದಿಗೆ ಬೆಂಗಳೂರಿನಿಂದ ವಿಮಾನದ ಮೂಲಕ ಹೊರಟು ಬೆಳಿಗ್ಗೆ 11 ಗಂಟೆಗೆ ಹುಬ್ಬಳ್ಳಿ ವಿಮಾನ ನಿಲ್ದಾಣಕ್ಕೆ ಆಗಮಿಸುವರು. ಬೆಳಿಗ್ಗೆ 11.10 ಗಂಟೆಗೆ ಹುಬ್ಬಳ್ಳಿ ವಿಮಾನ ನಿಲ್ದಾಣದಿಂದ ರಸ್ತೆ ಮೂಲಕ ಹೊರಟು ಸಿರಗುಪ್ಪಿ, ಅಣ್ಣಿಗೇರಿ, ಹುಲಕೋಟಿ ಮಾರ್ಗವಾಗಿ ಬೆಳಿಗ್ಗೆ 11.40 ಗಂಟೆಗೆ ಗದುಗಿಗೆ ಆಗಮಿಸುವರು. ಗದಗ ಮುಳಗುಂದ ರಸ್ತೆಯಲ್ಲಿನ ಕನಕ ಭವನ ಶ್ರೀ ರಾಕೇಶ ಸಿದ್ದರಾಮಯ್ಯ ಸಭಾಂಗಣದಲ್ಲಿ ಮುಖ್ಯಮಂತ್ರಿಗಳೊಂದಿಗೆ ಗದಗ



ತಾಲೂಕು ಕುರುಬರ ಸಂಘ ( ರಿ) ಗದಗ ವತಿಯಿಂದ ಆಯೋಜಸಿರುವ ತಾಲೂಕು ಸಂಘದ ರಜತ ಮಹೋತ್ಸವ ಸವಿನೆನಪಿಗಾಗಿ ಸ್ಮರಣ ಸಂಚಿಕೆ ಬಿಡುಗಡೆ ರಾಜ್ಯ ಮಟ್ಟದ ಕನಕೋತ್ಸವ ಹಾಗೂ ಸಂಘ ಜೀವಿ ಫಕೀರಪ್ಪ ಹೆಬಸೂರ ಅವರ ಅಭಿನಂದನಾ ಗ್ರಂಥ ಸಮರ್ಪಣೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು ಮತ್ತು ಗದಗನಲ್ಲಿ ವಾಸ್ತವ್ಯ ಮಾಡುವರು.

ಸೆಪ್ಟೆಂಬರ್ 21 ರಂದು ಬೆಳಿಗ್ಗೆ 10 ಗಂಟೆಗೆ ಗದಗ ವಾರ್ಡ್ ನಂ. 30 ವಾಂಬೆ ಬಡಾವಣೆಯಲ್ಲಿ ರಾಜಕಾಲುವೆ ಕಾಮಗಾರಿಯ ಭೂಮಿ ಪೂಜೆ ಕಾರ್ಯಕ್ರಮದಲ್ಲಿ ಭಾಗವಹಿಸುವರು. ಬೆಳಿಗ್ಗೆ 11 ಗಂಟೆಗೆ ಗದಗ ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿನ ಗದಗ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿ ಸಭೆ ಹಾಗೂ ದೇಶವ್ಯಾಪಿ ಮತಕಳ್ಳತನ ನಿಲ್ಲಿಸಿ ಸಹಿ ಸಂಗ್ರಹಣಾ ಅಭಿಯಾನ ಕುರಿತು ಪೂರ್ವಭಾವಿ ಸಭೆ ಜರುಗಿಸುವರು. ಮಧ್ಯಾಹ್ನ 12 ಗಂಟೆಗೆ ಗದಗ ಬೆಟಗೇರಿ ಅವಳಿ ನಗರದ ವಾರ್ಡ್ ನಂ. 16 ರಲ್ಲಿ ಸಿಸಿ ರಸ್ತೆ , ಹಾಗೂ ವಾರ್ಡ್ ನಂ. 17 ಮತ್ತು 18 ರಲ್ಲಿ ಗೌರವ ಘಟಕದ ಭೂಮಿ ಪೂಜೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು. ಸಂಜೆ 5 ಗಂಟೆಗೆ ಹುಲಕೋಟಿಯಲ್ಲಿ 2023-24ನೇ ಸಾಲಿನ ಆರ್.ಐ.ಡಿ.ಎಫ್. ಟ್ರಾಂಚ್ -29 ರ ಅಡಿ ನಿರ್ಮಾಣಗೊಂಡಿರುವ ನೂತನ ರೈತ ಸಂಪರ್ಕ ಕೇಂದ್ರದ ಗೋದಾಮು ಉದ್ಘಾಟನೆ ಕಾರ್ಯಕ್ರಮದಲ್ಲಿ ಭಾಗವಹಿಸುವರು. ರಾತ್ರಿ 9 ಗಂಟೆಗೆ ಗದಗಿನಿಂದ ರಸ್ತೆ ಮೂಲಕ ಹುಬ್ಬಳ್ಳಿಗೆ ಪ್ರಯಾಣಿಸಿ ಅಲ್ಲಿಂದ ಬೆಂಗಳೂರಿಗೆ ಹೊರಡುವರು ಎಂದು ಪ್ರಕಟಣೆ ತಿಳಿಸಿದೆ.

## ಪೂರ್ವಭಾವಿ ಸಭೆ ಇಂದು

■ವಿಜಯಸಾಕ್ಷಿ ಸುದ್ದಿ, ರೋಣ

ಮಹರ್ಷಿ ವಾಲ್ಮೀಕಿ ಜಯಂತಿ ಆಚರಣೆಯ ಕುರಿತು ಸೆ. 20ರಂದು ಬೆಳಿಗ್ಗೆ 10.30ಕ್ಕೆ ತಹಸೀಲ್ದಾರ ಕಚೇರಿಯ ಸಭಾಂಗಣದಲ್ಲಿ ದಂಡಾಧಿಕಾರಿಗಳಾದ ನಾಗರಾಜ ಕೆ ಅಧ್ಯಕ್ಷತೆಯಲ್ಲಿ ಪೂರ್ವಭಾವಿ ಸಭೆಯನ್ನು ಹಮ್ಮಿಕೊಳ್ಳಲಾಗಿದೆ. ತಾಲೂಕ ಮಟ್ಟದ ಅಧಿಕಾರಿಗಳು, ಸಮಾಜದ ಮುಖಂಡರು, ಯುವಕರು, ಸಾರ್ವಜನಿಕರು ಸಭೆಯಲ್ಲಿ ಭಾಗವಹಿಸಿ ತಮ್ಮ ಸಲಹೆ-ಸೂಚನೆಗಳನ್ನು ನೀಡಬೇಕು ಎಂದು ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿ ಗೀತಾ ಆಲೂರ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

## ಇಂದು ಗದಗ ಜಿಲ್ಲೆಗೆ ಸಿಎಂ ಸಿದ್ದರಾಮಯ್ಯ

▶▶ಮೊದಲನೇ ಪುಟದಿಂದ

ವತಿಯಿಂದ ಆಯೋಜಿಸಿರುವ " ತಾಲೂಕು ಸಂಘದ ರಜತ ಮಹೋತ್ಸವ ಸವಿನೆನಪಿಗಾಗಿ ಸ್ಮರಣ ಸಂಚಿಕೆ ಬಿಡುಗಡೆ " ರಾಜ್ಯ ಮಟ್ಟದ ಕನಕೋತ್ಸವ ಹಾಗೂ ಸಂಘ ಜೀವಿ ಫಕೀರಪ್ಪ ಹೆಬಸೂರ ಅವರ ಅಭಿನಂದನಾ ಗ್ರಂಥ ಸಮರ್ಪಣೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು.

ಮಧ್ಯಾಹ್ನ 3.30 ಗಂಟೆಗೆ ಗದಗನಿಂದ ರಸ್ತೆ ಮೂಲಕ ಹುಲಕೋಟಿ, ಅಣ್ಣಿಗೇರಿ, ಸಿರಗುಪ್ಪಿ ಮಾರ್ಗವಾಗಿ ಹುಬ್ಬಳ್ಳಿಗೆ ಪ್ರಯಾಣಿಸಿ, ನಂತರ ಬೆಂಗಳೂರಿಗೆ ಹೊರಡುವರು ಎಂದು ಪ್ರಕಟಣೆ ತಿಳಿಸಿದೆ.

# ಉಪನ್ಯಾಸ ಕಾರ್ಯಕ್ರಮ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ


ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ಸೆ. 20ರಂದು ಸಂಜೆ 6.30 ಗಂಟೆಗೆ ತೋಂಟದ ಸಿದ್ಧಲಿಂಗಶ್ರೀಗಳ ಕನ್ನಡ ಭವನ, ಕಸಾಪ ಕಾರ್ಯಾಲಯದಲ್ಲಿ ಸಾಹಿತ್ಯ ಪರಿಷತ್ತಿನ ಸಂಸ್ಥಾಪಕರಲ್ಲಿ ಒಬ್ಬರಾದ ಭಾರತರತ್ನ ಸರ್ ಎಂ. ವಿಶ್ವೇಶ್ವರಯ್ಯನವರ ಜಯಂತಿ ಅಂಗವಾಗಿ ಉಪನ್ಯಾಸ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಸರ್ ಎಂ. ವಿಶ್ವೇಶ್ವರಯ್ಯನವರ ಜೀವನ ಮತ್ತು ಸಾಧನೆ ಕುರಿತು ಶಿಕ್ಷಣ ಚಿಂತಕ ರಾಮಚಂದ್ರ ಮೋನೆ ಉಪನ್ಯಾಸ ನೀಡುವರು. ವಿದ್ಯಾದಾನ ಸಮಿತಿಯ ಬಾಲಕರ ಪದವಿಪೂರ್ವ ಮಹಾವಿದ್ಯಾಲಯದ ನಿವೃತ್ತ ಉಪನ್ಯಾಸಕ ಪಿ.ಆರ್. ಇನಾಮದಾರ ಹಾಗೂ ಎಚ್.ಸಿ.ಇ.ಎಸ್ ಪದವಿ ಮಹಾವಿದ್ಯಾಲಯದ ನಿವೃತ್ತ ಉಪನ್ಯಾಸಕ ಶಶಿಕಾಂತ ಕೊರ್ಲಹಳ್ಳಿ ಮುಖ್ಯ ಅತಿಥಿಗಳಾಗಿ ಆಗಮಿಸುವರು. ಅಧ್ಯಕ್ಷತೆಯನ್ನು ಜಿಲ್ಲಾ ಕ.ಸಾ.ಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ವಹಿಸುವರು.

ಕಾರ್ಯಕ್ರಮದಲ್ಲಿ ಸಾಹಿತ್ಯಾಭಿಮಾನಿಗಳು, ಸಾಹಿತಿಗಳು, ಪರಿಷತ್ತಿನ ಸದಸ್ಯರು ಭಾಗವಹಿಸಬೇಕೆಂದು ಕಿಶೋರಬಾಬು ನಾಗರಕಟ್ಟಿ, ದತ್ತಪ್ರಸನ್ನ ಪಾಟೀಲ, ಡಿ.ಎಸ್. ಬಾಪುರಿ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

### ಹಿರೇಮಠದ ಜಾತ್ರೆ ನವೆಂಬರ್ 9ರಿಂದ 17ರವರೆಗೆ; ಮಲ್ಲಿಕಾರ್ಜುನ ಶ್ರೀಗಳು

# ಶ್ರೀ ವೀರಭದ್ರೇಶ್ವರ ಪುರಾಣವು ವಿಶಿಷ್ಠವಾಗಿದೆ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣದ ಹಿರೇಮಠದ ಜಾತ್ರೆಯು ನವೆಂಬರ್ 9ರಿಂದ 17ರವರೆಗೆ 9 ದಿನಗಳ ಕಾಲ ಜರುಗಲಿದೆ ಎಂದು ಹಿರೇಮಠದ ಪಟ್ಟಾಧ್ಯಕ್ಷರಾದ ಷ. ಬ್ರ. ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯರು ತಿಳಿಸಿದರು.

ಹಿರೇಮಠದ ಸಭಾಭವನದಲ್ಲಿ ಗುರುವಾರ ಸಂಜೆ ನಡೆದ ಜಾತ್ರಾಮಹೋತ್ಸವದ ದಿವ್ಯ ಸಾನ್ನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು.

ಜಾತ್ರೆಯನ್ನು ಈ ಸಾರೆ ಸಾಧ್ಯವಾದಷ್ಟು ಸರಳ ರೀತಿಯಲ್ಲಿ ಆಚರಣೆ ಮಾಡೋಣ. ಪ್ರತಿ ವರ್ಷ ಪುರಾಣಿಕರನ್ನು ಕರೆಯಿಸಿ ಪುರಾಣವನ್ನು ಹೇಳಿಸುತ್ತಿದ್ದೆವು. ಬದಲಾಗಿ ಈ ವರ್ಷ ತಾವೇ ಶ್ರೀ ವೀರಭದ್ರೇಶ್ವರ ಪುರಾಣವನ್ನು ಹೇಳುವುದಾಗಿ ಶ್ರೀಗಳು ತಿಳಿಸಿದರು. ಇದರೊಂದಿಗೆ ಸಿದ್ಧಾಂತ ಶಿಖಾಮಣಿಯ ಕೆಲವಷ್ಟು ಅಂಶಗಳನ್ನು ಸಹ ನಿತ್ಯವೂ ಹೇಳುತ್ತ ಬರುವುದಾಗಿ ಹೇಳಿದರು. ಪ್ರತಿವರ್ಷದಂತೆ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಸನ್ಮಾನಿಸುವುದಾಗಿ ತಿಳಿಸಿದ ಶ್ರೀಗಳು, ಕಳೆದ ಮಾರ್ಚ್-ಏಪ್ರಿಲ್‌ನಲ್ಲಿ ಮೊದಲ ಪರೀಕ್ಷೆಯಲ್ಲಿ ಪಾಸಾದ ಎಸ್‌ಎಸ್‌ಎಲ್‌ಸಿ ಮತ್ತು ಪಿಯು ವಿದ್ಯಾರ್ಥಿಗಳನ್ನು ಇದಕ್ಕೆ ಪರಿಗಣಿಸುತ್ತಿದ್ದು, ಶೇ. 90 ಮತ್ತು ಅದಕ್ಕಿಂತ ಹೆಚ್ಚಿನ ಅಂಕ ಗಳಿಸಿದವರನ್ನು ಸನ್ಮಾನಿಸಲಾಗುವುದು. ಇದರೊಂದಿಗೆ ಪಟ್ಟಣದ ವಿವಿಧ ಸಂಘ-ಸಂಸ್ಥೆಗಳ ಅಧ್ಯಕ್ಷರುಗಳನ್ನು ಸನ್ಮಾನಿಸುವ ವಿಚಾರವೂ ಇದೆ ಎಂದು ತಿಳಿಸಿದರು.

ಸಭೆಯಲ್ಲಿ ವೇ.ಮೂ. ರುದ್ರಮುನಿ ಶಾಸ್ತ್ರಿಗಳು, ಡಾ. ಕೆ.ಬಿ. ಧನ್ನೂರ, ಡಿ.ಎ. ಅರವಟಗಿಮಠ, ಕೆ.ಎಸ್. ಕಳಕಣ್ಣವರ, ಡಾ. ಆರ್.ಕೆ. ಗಚ್ಚಿನಮಠ, ಪ.ಪಂ ಅಧ್ಯಕ್ಷ ಫಕೀರಪ್ಪ ಮಳ್ಳಿ, ಉಪಾಧ್ಯಕ್ಷ ಕುಮಾರಸ್ವಾಮಿ ಕೋರಧಾನ್ಯಮಠ, ಎಸ್.ಕೆ. ಪಾಟೀಲ, ಬಸವರಾಜ ಕಳಕಣ್ಣವರ, ಮಲ್ಲನಗೌಡ ಪಾಟೀಲ, ಸಿದ್ದಪ್ಪರಾಗಿ, ಸಕ್ರೆಪ್ಪ ಹಡಪದ, ಶಿವಪುತ್ರಪ್ಪ ಸಂಗನಾಳ, ಎಮ್.ಎಸ್. ದಢೇಸೂರಮಠ, ನಿಂಗನಗೌಡ ಲಕ್ಕನಗೌಡ್ರ, ಬಸಪ್ಪ ಮಡಿವಾಳರ, ರಮೇಶ ಕಳಕೊಣ್ಣವರ, ಪುಟ್ಟೇಶ ಕುಂಬಾರ, ಶಿವಯೋಗಿ ಜಕ್ಕಲಿ, ಖಾದರಬಾಷಾ ಹೂಲಗೇರಿ, ನಿಂಗಪ್ಪ ಕಣವಿ, ಶೇಕಪ್ಪ ಕೆಂಗಾರ ಮುಂತಾದವರು ಪಾಲ್ಗೊಂಡು ಸೂಕ್ತ ಸಲಹೆ-ಸೂಚನೆಗಳನ್ನು ನೀಡಿದರು. ಈಶ್ವರ ಬೆಟಗೇರಿ ನಿರೂಪಿಸಿದರು. ಡಾ. ಎಲ್.ಎಸ್. ಗೌರಿ ವಂದಿಸಿದರು.

ಶ್ರೀ ವೀರಭದ್ರೇಶ್ವರ ಪುರಾಣವು ಅತ್ಯಂತ ವಿಶಿಷ್ಠಮಯ ಪುರಾಣವಾಗಿದೆ. ಅದರಲ್ಲಿ ಬರುವ ಅನೇಕ ಮೌಲ್ಯಗಳನ್ನು ವಿಚಾರಗಳನ್ನು ಎಲ್ಲರೂ ತಿಳಿಯಬೇಕಿದ್ದು, ತಾವೆಲ್ಲರೂ ತಪ್ಪದೇ ಪುರಾಣವನ್ನಾಲಿಸಲು ಬರಬೇಕೆಂದು ಮಲ್ಲಿಕಾರ್ಜುನ ಶ್ರೀಗಳು ತಿಳಿಸಿದರು.


ಕರ್ನಾಟಕ ಸರ್ಕಾರ (ರಾಷ್ಟ್ರೀಯ ಆರೋಗ್ಯ ಅಭಿಯಾನ)

**ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೊಸೈಟಿ, ಗದಗ.**

**ಜಿಲ್ಲಾ ಕಾರ್ಯಕ್ರಮ ನಿರ್ವಹಣಾ ಘಟಕ, ಗದಗ E-mail id:rchogadag@gmail.com**

ಕ್ರ.ಸಂ:ಜಿಆಕುಕಾಸೋಗ/ಎನ್.ಹೆಚ್.ಎಂ./MHU-ನೇ.ಪ್ರ/275/2025-26 ದಿನಾಂಕ : 18.09.2025

**ನೇಮಕಾತಿ ಪ್ರಕಟಣೆ**

ರಾಷ್ಟ್ರೀಯ ಆರೋಗ್ಯ ಅಭಿಯಾನದಡಿಯಲ್ಲಿ ರಾಜ್ಯ ಮಟ್ಟದ ಮಾನವ ಸಂಪನ್ಮೂಲ RoP-2025-26 ಅನುಮೋದನೆಯಂತೆ ಸಂಚಾರಿ ಆರೋಗ್ಯ ಘಟಕಗಳಿಗೆ ಅನುಮೋದನೆಗೊಂಡ 02 ಎಮ್.ಬಿ.ಬಿಎಸ್ ವೈದ್ಯಾಧಿಕಾರಿಗಳು, 02 ಶುಶ್ರೂಷ ಅಧಿಕಾರಿಗಳ ಮತ್ತು 02 ಪ್ರಯೋಗಶಾಲಾ ತಂತ್ರಜ್ಞರುಗಳ ಹುದ್ದೆಗಳು ಖಾಲಿಯಿದ್ದು ಸದರಿ ಹುದ್ದೆಗಳಿಗೆ ಅರ್ಜಿಗಳನ್ನು ಆಹ್ವಾನಿಸಲಾಗಿದ್ದು. ಅಭ್ಯರ್ಥಿಗಳು Online ಮೂಲಕ ಮಾತ್ರ ಅರ್ಜಿಗಳನ್ನು ಸಲ್ಲಿಸುವುದು. ಅರ್ಜಿಗಳ ಪ್ರಾರಂಭ ದಿನಾಂಕ : **19-09-2025** ರಿಂದ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕ : **25.09.2025**ರ ವರೆಗೆ ಅರ್ಜಿ ಸಲ್ಲಿಸಬೇಕಾದ **Website https://gadag.nic.in** ನಲ್ಲಿ ಅರ್ಜಿ ಸಲ್ಲಿಸುವುದು ಹಾಗೂ ಕೊನೆಯ ದಿನಾಂಕದ ನಂತರ ಬಂದ ಅರ್ಜಿಗಳನ್ನು ಪರಿಗಣಿಸುವುದಿಲ್ಲ. ಎನ್.ಹೆಚ್.ಎಮ್ ಮಾರ್ಗಸೂಚಿ/ಆರ್.ಓ.ಪಿ ಪ್ರಕಾರ ಹುದ್ದೆಗಳನ್ನು ಹೆಚ್ಚು ಅಥವಾ ಕಡಿಮೆ ಮಾಡುವ ಅಧಿಕಾರ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘಕ್ಕೆ ಇರುತ್ತದೆ. ಆಯ್ಕೆ ಸಮಿತಿ ಹಾಗೂ ಸಂಘದ ನಿರ್ಧಾರವೇ ಅಂತಿಮ ನಿರ್ಧಾರವಾಗಿರುತ್ತದೆ. (ವಿ.ಸೂ: ಪರಿಶಿಷ್ಟ ಜಾತಿ ಇದ್ದಲ್ಲಿ ಉಪಜಾತಿಯನ್ನು ಖಡ್ಡಾಯವಾಗಿ Website https://gadag.nic.in ನಲ್ಲಿ ನಮೂದಿಸಲು ಸೂಚಿಸಲಾಗಿದೆ.)

| ಕ್ರ. ಸಂ | ಹುದ್ದೆ | ವಿದ್ಯಾರ್ಹತೆ | ಅನುಭವದ ವಿವರ ಮತ್ತು ವಯೋಮಿತಿ | ರೋಸ್ಟರ್ ಸಂಖ್ಯೆ & ವಿವರ | ವೇತನ (ಪ್ರತಿ ಮಾಹೆಗೆ) |
|---|---|---|---|---|---|
| 1 | ಎಂ.ಬಿ.ಬಿ.ಎಸ್ ವೈದ್ಯಾಧಿಕಾರಿಗಳು (ಹುದ್ದೆಗಳ ಸಂಖ್ಯೆ:02) | • ಎಂ.ಬಿ.ಬಿಎಸ್ ಉತ್ತೀರ್ಣರಾಗಿರಬೇಕು ಹಾಗೂ ಕಡ್ಡಾಯವಾಗಿ Internship ಪೂರೈಸಿರಬೇಕು.<br>• ಕೆ.ಎಂ.ಸಿ ಯ ನೋಂದಣಿ ಹೊಂದಿರತಕ್ಕದು.<br>• ಸಂಬಂಧಪಟ್ಟ ವಿಶ್ವ ವಿದ್ಯಾನಿಲಯದಿಂದ Convocation/Degree Certificate ಹೊಂದಿರಬೇಕು. | ಅನುಭವ : ಕನಿಷ್ಠ ಎರಡು ವರ್ಷಗಳ ಸೇವೆ ಸಲ್ಲಿಸಿರುವ ಅನುಭವನವನ್ನು ಹೊಂದಿರಬೇಕು. ವಯೋಮಿತಿ : ಗರಿಷ್ಠ 65 ವರ್ಷ | 1. ಪರಿಶಿಷ್ಟ ಜಾತಿ ಪ್ರವರ್ಗ-ಎ (ಸಾಮಾನ್ಯ ಅಭ್ಯರ್ಥಿ)<br>2. ಸಾವಾನ್ಯ ಅಭ್ಯರ್ಥಿ (ಮಹಿಳಾ ಅಭ್ಯರ್ಥಿ) | ರೂ. 75,000/- |
| 2 | ಶುಶೂಷಕರು (ಹುದ್ದೆಗಳ ಸಂಖ್ಯೆ:02) | • ಜಿ.ಎನ್.ಎಂ ನರ್ಸಿಂಗ್/ಬಿ.ಎಸ್.ಸಿ ನರ್ಸಿಂಗ್<br>• ಕರ್ನಾಟಕ ನರ್ಸಿಂಗ್ ಕೌನ್ಸಿಲಿಂಗ್‌ನಲ್ಲಿ ನೋಂದಣಿಯಾಗಿರಬೇಕು. | ಅನುಭವ : ಕನಿಷ್ಠ ಎರಡು ವರ್ಷಗಳ ಸೇವೆ ಸಲ್ಲಿಸಿರುವ ಅನುಭವನವನ್ನು ಹೊಂದಿರಬೇಕು. ವಯೋಮಿತಿ : ಗರಿಷ್ಠ 45 ವರ್ಷ | 1. ಪರಿಶಿಷ್ಟ ಜಾತಿ ಪ್ರವರ್ಗ-ಎ (ಸಾಮಾನ್ಯ ಅಭ್ಯರ್ಥಿ)<br>2. ಸಾಮಾನ್ಯ ಅಭ್ಯರ್ಥಿ (ಮಹಿಳಾ ಅಭ್ಯರ್ಥಿ) | ರೂ. 22,000/- |
| 3 | ಪ್ರಯೋಗ ಶಾಲಾ ತಂತ್ರಜ್ಞರು (ಹುದ್ದೆಗಳ ಸಂಖ್ಯೆ:02) | • ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ತೇರ್ಗಡೆಯನ್ನು ಹೊಂದಿರಬೇಕು ಮತ್ತು ಕರ್ನಾಟಕ ರಾಜ್ಯ ಅರೆ ವೈದ್ಯಕೀಯ ಮಂಡಳಿಯು ನಡೆಸುವ ಪ್ರಯೋಗ ಶಾಲಾ ತಂತ್ರಜ್ಞತೆಯಲ್ಲಿ ಮೂರು ವರ್ಷದ ಡಿಪ್ಲೋಮಾ ಹೊಂದಿರಬೇಕು.<br>ಅಥವಾ<br>• ದ್ವಿತೀಯ ಪಿ.ಯು.ಸಿ ಯಲ್ಲಿ ವಿಜ್ಞಾನ ವಿಷಯದಲ್ಲಿ ಉತ್ತೀರ್ಣ ಮತ್ತು ಕರ್ನಾಟಕ ರಾಜ್ಯ ಅರೆ ವೈದ್ಯಕೀಯ ಮಂಡಳಿಯು ನಡೆಸುವ ಪ್ರಯೋಗ ಶಾಲಾ ತಂತ್ರಜ್ಞತೆಯಲ್ಲಿ ಎರಡು ವರ್ಷದ ಡಿಪ್ಲೋಮಾ ಹೊಂದಿರಬೇಕು<br>• ಪ್ರಯೋಗ ಶಾಲಾ ತಂತ್ರಜ್ಞರು ಕಡ್ಡಾಯವಾಗಿ ಕರ್ನಾಟಕ ರಾಜ್ಯ ಅರೆ ವೈದ್ಯಕೀಯ ಮಂಡಳಿಯ ನೋಂದಣಿ ಹೊಂದಿರುಬೇಕು. | ಅನುಭವ: ಕನಿಷ್ಠ ಎರಡು ವರ್ಷಗಳ ಸೇವೆ ಸಲ್ಲಿಸಿರುವ ಅನುಭವನವನ್ನು ಹೊಂದಿರಬೇಕು. ವಯೋಮಿತಿ : ಗರಿಷ್ಠ 45 ವರ್ಷ | 1. ಪರಿಶಿಷ್ಟ ಜಾತಿ ಪ್ರವರ್ಗ-ಎ (ಸಾಮಾನ್ಯ ಅಭ್ಯರ್ಥಿ)<br>2. ಸಾಮಾನ್ಯ ಅಭ್ಯರ್ಥಿ (ಮಹಿಳಾ ಅಭ್ಯರ್ಥಿ) | ರೂ. 20,000/- |

ವಾಸಾಸಂಇ/ಗದಗ/ಕೆಎಸ್‌ಎಂಸಿಎ/293/2025-26

ಸಹಿ/- ಉಪಾಧ್ಯಕ್ಷರು
ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೊಸೈಟಿ, ಹಾಗೂ
ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು ಗದಗ


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka